ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ

Raichur, Koppal, Yadagiri, Kalburgi, Ballary, Vijaya Nagar, Bidar

ರಾಯಚೂರಿನಿಂದ ರಾಜ್ಯದವರೆಗೆ

# ಕನ್ನಡ ಮಾತೃಭೂಮಿ

ಕನ್ನಡದಿನ ಪತ್ರಿಕೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್

EDITOR : SHYAM SUNDER L

KANNADA MATHRUBHOOMI

KANNADA DAILY PAPER

mathrubhoomircr@gmail.com

Call : 9886635117

ಸಂಪುಟ : Volume : 03 ಸಂಚಿಕೆ Issuse : 182 | ದಿನಾಂಕ : 01-05-2026 Date : 01-05-2026 | ಶುಕ್ರವಾರ Friday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ರಣಬಿಸಿಲಿಗೆ ನರೇಗಾ ಕೂಲಿಕಾರ ಹೃದಯಾಘಾತದಿಂದ ಸಾವು..!

■ ಕನ್ನಡ ಮಾತೃ ಭೂಮಿ ವಾರ್ತೆ

**ಸಿಂಧನೂರು,ಏ.30**–ತಾಲೂಕಿನ ಪಗಡದಿನ್ನಿ ಗ್ರಾ.ಪಂ. ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊಲಗಾಲುವೆ ಸ್ವಚ್ಛ ಮಾಡುವ ಸಂದರ್ಭದಲ್ಲಿ ಕೂಲಿಕಾರ ಹೃದಯಾಘಾತದಿಂದ ಸಾವನ್ನಪ್ಪಿದ ಘಟನೆ ಮುಳ್ಳೂರು ಇಜೆ ಗ್ರಾಮದಲ್ಲಿ ವರದಿಯಾಗಿದೆ.

ಅಂಬಣ್ಣ(68) ಎನ್ನುವವರು ಹೃದಯಾಘಾತದಿಂದ ನಿಧನರಾದ ದುರ್ದೈವಿಯಾಗಿದ್ದಾರೆ. ಬೆಳಗ್ಗೆ 10 ಗಂಟೆ ಸುಮಾರಿಗೆ ಎನ್ಎಂಎಸ್ ಮಾಡಿಸಿ ಕೆಲಸಕ್ಕೆ ಹೋಗಿದ್ದಾನೆ. ಮಧ್ಯಾಹ್ನ ರಣಬಿಸಿಲಿನ ಸಂದರ್ಭದಲ್ಲಿ ಕೆಲಸ ಮಾಡುವಾಗ ಎದೆ ನೋವು ಕಾಣ ಸಿಕೊಂಡು ಅಂಬಣ್ಣ ಹೃದಯಾಘಾತಕ್ಕೆ ಒಳಗಾಗಿದ್ದಾನೆ. ಅಲ್ಲಿಂದ ಆಸ್ಪತ್ರೆಗೆ ಸಾಗಿಸಬೇಕು ಎನ್ನುವಷ್ಟರಲ್ಲಿ ಆತನ ಪ್ರಾಣಪಕ್ಷಿ ಹಾರಿಹೋಗಿದೆ.

ತಿಳುವಳಿಕೆ ಕೊರತೆ: ನರೇಗಾ ಕೆಲಸ ಮಾಡುವ ಸಂದರ್ಭದಲ್ಲಿ ತೀವ್ರ ಹೃದಯಾಘಾತಕ್ಕೆ ಒಳಗಾಗಿ ಸಾವನ್ನಪ್ಪಿದ ಅಂಬಣ್ಣ ಧಾರ್ಮಿಕವಾಗಿ ಗುರುಬೋಧ ಹಿಡಿದಿದ್ದು, ತಿಳುವಳಿಕೆ ಕೊರತೆಯಿಂದ ಕುಟುಂಬಸ್ಥರು ಆತನ ಮೃತ ದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲು ಹಿಂದೇಟು ಹಾಕಿದ್ದಾರೆ. ಆದರೆ ಗುರುವಾರ ಬೆಳಗ್ಗೆ ಮುಳ್ಳೂರಿನಲ್ಲಿ ಅಂತ್ಯ ಸಂಸ್ಕಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪರಿಹಾರಕ್ಕೆ ಒತ್ತಾಯ: ನರೇಗಾ ಕೆಲಸ ಮಾಡುವ ಸಂದರ್ಭದಲ್ಲಿಯೇ ಅಂಬಣ್ಣ ತೀವ್ರ ಹೃದಯಾಘಾತಕ್ಕೆ ಒಳಗಾಗಿ ಸಾವನ್ನಪ್ಪಿದ್ದು, ಅಂಬಣ್ಣನೇ ಆ ಕುಟುಂಬದ ಮುಖ್ಯಸ್ಥನಾಗಿದ್ದು, ಕೂಡಲೇ ಸರಕಾರ ಪರಿಹಾರ ನೀಡಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಬಸವಂತರಾಯಗೌಡ ಕಲ್ಲೂರು ಒತ್ತಾಯಿಸಿದ್ದಾರೆ.

## ನಗರದಲ್ಲಿ ರಿಂಗ್ ರೋಡ್ ನಿರ್ಮಾಣ ಮಾಡಲು ಆಗ್ರಹಿಸಿ ಮನವಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.30**–ರಾಯಚೂರು ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆ ಸಮಸ್ಯೆ ನಿವಾರಣೆಗೆ ರಿಂಗ್ ರೋಡ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಸಮಾಜ ಸೇವಕ ಬಾಬುರಾವ್ ಅವರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ನಗರದ ಡಿಸಿ ಕಚೇರಿಯಲ್ಲಿ ಮನವಿ ಸಲ್ಲಿಸಿದ ಅವರು, ನಗರ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಹಿನ್ನೆಲೆ ಈಗಿರುವ ರಸ್ತೆಗಳು ಹಗಲಿರುಳು ಭಾರೀ ವಾಹನ ದಟ್ಟಣೆಯನ್ನು ಎದುರಿಸುತ್ತಿದ್ದು, ಜನರಿಗೆ ತೀವ್ರ ತೊಂದರೆ ಉಂಟಾಗುತ್ತಿದೆ. ವಿಶೇಷವಾಗಿ ಶಕ್ತಿನಗರದಿಂದ ನವೋದಯ ಮೆಡಿಕಲ್ ಕಾಲೇಜ್ ವರೆಗಿನ ಎನ್ ಎಚ್-167 ರಸ್ತೆ ಅಪಾಯಕಾರಿ ಸ್ಥಿತಿಗೆ ತಲುಪಿದ್ದು, ಕಳೆದ ಮೂರ್ನಾಲ್ಕು ವರ್ಷಗಳಲ್ಲಿ 800ಕ್ಕೂ ಅಧಿಕ ಮಂದಿ ಬಲಿಯಾದ ಘಟನೆಗಳು ಆತಂಕ ಹುಟ್ಟಿಸಿವೆ ಎಂದರು.

ಇತ್ತೀಚೆಗೆ 18 ವರ್ಷದ ಯುವಕನೊಬ್ಬ ನಡುರಸ್ತೆಯಲ್ಲೇ ದಾರುಣವಾಗಿ ಮೃತಪಟ್ಟ 4

ಮಾದಕ ವಸ್ತುಗಳು ದುಷ್ಪರಿಣಾಮ ಕುರಿತು ಜಾಗೃತಿ ಕಾರ್ಯಕ್ರಮ

## ಮಾದಕ ವ್ಯಸನದಿಂದ ಜೀವನ ಬಲಿ-ಡಿಸಿ ನಿತೀಶ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.30**–ವೈದ್ಯಕೀಯ ವಿದ್ಯಾರ್ಥಿಗಳಲ್ಲಿ ಮಾದಕ ವ್ಯಸನ ಹೆಚ್ಚುತ್ತಿರುವುದಕ್ಕೆ ನಿರಂತರ ಒತ್ತಡ ಹಾಗೂ ಔಷಧಿಗಳ ಸುಲಭ ಪ್ರವೇಶವೇ ಪ್ರಮುಖ ಕಾರಣವಾಗಿದ್ದು, ಒಮ್ಮೆ ಮಾತ್ರ ಎಂಬ ನಿರ್ಧಾರವೇ ದೊಡ್ಡ ಅಪಾಯಕ್ಕೆ ದಾರಿ ಮಾಡಿಕೊಡುತ್ತದೆ ಎಂದು ಜಿಲ್ಲಾಧಿಕಾರಿ ನಿತೀಶ್ ಹೇಳಿದರು.

ಅವರಿಂದು ನಗರದ ರಿಮ್ಸ್ ಮೆಡಿಕಲ್ ಕಾಲೇಜು ಸಭಾಂಗಣದಲ್ಲಿ ಜಿಲ್ಲಾ ಎನ್‌ಕಾರ್ಡ್ ಸಮಿತಿಯಿಂದ ಹಮ್ಮಿಕೊಂಡಿದ್ದ ಮಾದಕ ವಸ್ತುಗಳ ಹಾಗೂ ಡ್ರಗ್ಸ್ ಬಳಕೆ ಹಾಗೂ ದುಷ್ಪರಿಣಾಮದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ವೈದ್ಯಕೀಯ ವಿದ್ಯಾರ್ಥಿಗಳು ನಿರಂತರ ಪರೀಕ್ಷೆಗಳು, ದೀರ್ಘಾವಧಿಯ ಆಸ್ಪತ್ರೆ ಕರ್ತವ್ಯಗಳು ಹಾಗೂ ಮಾನಸಿಕ ಒತ್ತಡದಿಂದಾಗಿ ಸುಲಭವಾಗಿ ವ್ಯಸನದ ಬಲೆಗೆ ಸಿಲುಕುವ ಸಾಧ್ಯತೆ ಹೆಚ್ಚಿದೆ ಎಂದು ಹೇಳಿದರು.

ಒಂದು ಬಾರಿ ಮಾತ್ರ ಎಂಬ ನಿರ್ಧಾರವೇ ಅಪಾಯದ ಆರಂಭವಾಗಿದ್ದು, ಹೆಚ್ಚಿನ ಸಂದರ್ಭಗಳಲ್ಲಿ ವ್ಯಸನವು ಒಮ್ಮೆ ಮಾತ್ರ ಎಂಬ ಚಿಕ್ಕ ನಿರ್ಧಾರದಿಂದ ಆರಂಭವಾಗುತ್ತದೆ. ಆರಂಭದಲ್ಲಿ ವಿಶ್ರಾಂತಿಗಾಗಿ ತೆಗೆದುಕೊಳ್ಳುವ ಪದಾರ್ಥಗಳು ನಿಧಾನವಾಗಿ ಅವಲಂಬನೆಗೆ ದಾರಿ ಮಾಡಿಕೊಡುತ್ತವೆ ಎಂದು ಎಚ್ಚರಿಸಿದರು.

ಜ್ಞಾನ ಇದ್ದರೂ ಅಪಾಯ ತಪ್ಪುವುದಿಲ್ಲ, ವೈದ್ಯಕೀಯ ವಿದ್ಯಾರ್ಥಿಗಳಿಗೆ ಔಷಧಿಗಳ ಬಗ್ಗೆ ತಿಳುವಳಿಕೆ ಇದ್ದರೂ, ಅದರಿಂದ ವ್ಯಸನದಿಂದ ರಕ್ಷಣೆ ಸಿಗುವುದಿಲ್ಲ. ನನಗೆ ಗೊತ್ತಿದೆ, ನಾನು ನಿಯಂತ್ರಿಸಬಹುದು ಎಂಬ ಭಾವನೆವೇ ಅಪಾಯಕ್ಕೆ ಕಾರಣವಾಗುತ್ತದೆ ಎಂದರು.

ಮಾದಕ ವ್ಯಸನವು ವಿದ್ಯಾರ್ಥಿಗಳ ಗಮನ ಶಕ್ತಿ, ಕುಟುಂಬ, ಸ್ನೇಹಿತರ ವಿಶ್ವಾಸ ಹಾಗೂ ವೃತ್ತಿ ಪರ ಪ್ರತಿಷ್ಠೆಗೆ ಹಾನಿ ಉಂಟುಮಾಡುತ್ತದೆ. ಇದರಿಂದ ಅವರ ವೈದ್ಯಕೀಯ ಸೇವೆಯ ಗುರಿಯೇ ಹಾಳಾಗುವ ಸಾಧ್ಯತೆ ಇದೆ. ಅದಕ್ಕಾಗಿ ವಿದ್ಯಾರ್ಥಿಗಳು ವ್ಯಸನದಿಂದ ದೂರ ಇರಲು ಕೆಲವು ಮುಖ್ಯ ಅಂಶಗಳ ಬಗ್ಗೆ ನಿಗಾ ವಹಿಸಬೇಕು ಎಂದರು.ತಮ್ಮ ನಡೆ, ನುಡಿಗಳನ್ನು ಸ್ವತಃ ಪರಿಶೀಲಿಸಿಕೊಳ್ಳಬೇಕು. ಸಮಸ್ಯೆಯನ್ನು 4

## ಮೇ.9ರಂದು ಚಿತ್ರದುರ್ಗದಲ್ಲಿ ಯಡಿಯೂರಪ್ಪನವರಿಗೆ ಅಭಿನಂದನಾ ಸಮಾರಂಭ-ರವಿಕುಮಾರ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.30**–ಕ್ಲಾಸ್ ಪಾರ್ಟಿಯಾಗಿದ್ದ ಬಿಜೆಪಿಯನ್ನು ಮಾಸ್ ಪಾರ್ಟಿಯನ್ನಾಗಿ ಪರಿವರ್ತಿಸಿ 50 ವರ್ಷದ ನಿರಂತರ ರಾಜಕೀಯ ಜೀವನವನ್ನು ನಡೆಸಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಇವರಿಗೆ ಮೇ.9 ರಂದು ಚಿತ್ರದುರ್ಗದಲ್ಲಿ ಅಭಿನಂದನಾ ಸಮಾರಂಭ ಅಭಿಮಾನಿಗಳು, ಬಿಜೆಪಿ ಕಾರ್ಯಕರ್ತರಿಂದ ಆಯೋಜಿಸಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಹೇಳಿದರು.

ಅವರಿಂದು ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿ, ಉತ್ತರ ದಕ್ಷಿಣ ಎನ್ನದೇ ರೈತರು, ಮಹಿಳೆಯರು, ಕಾರ್ಮಿಕರು ಸೇರಿದಂತೆ ರಾಜ್ಯ ಸಮಸ್ಯೆಗಳಿಗೆ ಧ್ವನಿಯಾಗಿ ಹೋರಾಟ ನಡೆಸಿರುವ ಬಿ.ಎಸ್.ಯಡಿಯೂರಪ್ಪ ರಾಜಕೀಯ ಜೀವನ 50 ವರ್ಷ ಕಂಡಿದೆ. ಬಿ.ಎಸ್.ಯಡಿಯೂರಪ್ಪನವರನ್ನು ಅಭಿನಂದಿಸಲು ಆಯೋಜಿಸಲಾಗಿರುವ ಸಮಾವೇಶಕ್ಕೆ ಕೇಂದ್ರ ಗೃಹ ಸಚಿವ ಅಮಿತಾಷಾ ಸೇರಿದಂತೆ ಮಾಜಿ ಮುಖ್ಯಮಂತ್ರಿಗಳು, ಕೇಂದ್ರದ ನಾಲ್ಕು ಜನ ಸಚಿವರು, ಮಠಾಧೀಶರುಗಳು ಸೇರಿದಂತೆ 4

## ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ಖಾಲಿ ಹುದ್ದೆಗಳಿಗೆ ದೊರೆಯ ಮುಕ್ತಿ - ಶಶಿಲ್ ನಮೋಶಿ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.30**–ರಾಜ್ಯದಲ್ಲಿ ಖಾಲಿಯಿರುವ 2 ಲಕ್ಷ 84 ಸಾವಿರ ಹುದ್ದೆಗಳು ಖಾಲಿಯಿದ್ದು ಸರ್ಕಾರ ಮಾತ್ರ 56 ಸಾವಿರ ಹುದ್ದೆಗಳನ್ನು ಭರ್ತಿ ಮಾಡುತ್ತಿರುವದು ಪ್ರತಿಶತ 20 ರಷ್ಟು ಮಾತ್ರ ಎಂದು ವಿಧಾನ ಪರಿಷತ್ ಸದಸ್ಯ ಶಶಿಲ್ .ಜಿ.ನಮೋಶಿ ಹೇಳಿದರು. ಕಳೆದ ಮೂರು ವರ್ಷಗಳಿಂದಲೂ ಖಾಲಿಹುದ್ದೆ ಭರ್ತಿ ಮಾಡುತ್ತಿಲ್ಲ. ಕಲ್ಯಾಣ ಕರ್ನಾಟಕ ಭಾಗಕ್ಕೆ 371(ಜೆ) ಕಾಯ್ದೆಯಾಗಿ ರೂಪಿತಗೊಂಡು 10 ವರ್ಷ ಕಳೆದಿದೆ ಅತಿಹೆಚ್ಚು ಹುದ್ದೆಗಳು ಖಾಲಿಯಿರುವ ಈ ಪ್ರದೇಶದಲ್ಲಿಯೇ ನೇಮಕಾತಿ ನಡೆದಿಲ್ಲ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿಗೆ ಯಾವುದೇ ಆರ್ಥಿಕ ಸಮಸ್ಯೆಯಿಲ್ಲ ಎನ್ನುದಾದರೆ ನೇಮಕಾತಿ ಏಕೆ ಮಾಡಿಲ್ಲ ಎಂದು ಪ್ರಶ್ನಿಸಿದರು. ಶಿಕ್ಷಕರ ನೇಮಕಾತಿಯಲ್ಲಿ 5 ಸಾವಿರ ಹುದ್ದೆ ನೇಮಿಸುವದಾಗಿ ಹೇಳುತ್ತಲೇ ಬಂದಿದೆ. ಈ ಹಿಂದೆ ಬಿಜೆಪಿಸ ಸರ್ಕಾರ ಅವಧಿಯಲ್ಲಿ ಪದವಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಕಾಂಗ್ರೆಸ ಸರ್ಕಾರ ಯಾವುದೇ ನೇಮಕಾತಿ ನಡೆಸಿಲ್ಲ ಎಂದು ಟೀಕಿಸಿದರು.

## ರಾಜ್ಯದಲ್ಲಿರುವ ಸರ್ಕಾರ ಇದ್ದರೂ ಇಲ್ಲದಂತೆ: ದುರಂಹಕಾರದಲ್ಲಿ ಜನರ ಸಮಸ್ಯೆ ಕೇಳುವವರಿಲ್ಲ-ರವಿಕುಮಾರ

**ರಾಯಚೂರು,ಏ.30**–ರಾಜ್ಯದ ಕಾಂಗ್ರೆಸ್ ಸರ್ಕಾರ ಆಡಳಿತ ಹಳಿತಪ್ಪಿದ ರೈಲಿನಂತಾಗಿದ್ದು, ಸಿಎಂ ಖುರ್ಚಿಗಾಗಿ ನಡೆಯುತ್ತಿರುವ ಬೆಳವಣಿಗೆಯಲ್ಲಿ ರಾಜ್ಯ ಜನರ ಸಮಸ್ಯೆಗಳು ಕೇಳುವವರೇ ಇಲ್ಲದಂತಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಆರೋಪಿಸಿದರು.

ಅವರಿಂದು ಮಾಧ್ಯಮಗಳೊಂದಿಗೆ ಮಾತನಾಡಿ, ರಾಜ್ಯದಲ್ಲಿ ಸರ್ಕಾರ ಇದ್ದು ಇಲ್ಲದಂತಾಗಿದೆ. ಖಜಾನೆ ಖಾಲಿಯಾಗಿದ್ದು, ಒಂದು ಮಳೆಗೆ ಬೆಂಗಳೂರಿನಲ್ಲಿ 8 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಐಪಿಎಲ್ ಪಂದ್ಯ ನಡೆಸಲು ಹೋಗಿ 10 ಜನರ ಜೀವ ಬಲಿ ಪಡೆಯಲಾಯಿತು. ಕಾನೂನು ಸುವ್ಯವಸ್ಥೆ ಸಂಪೂರ್ಣ ನೆಲಕಚ್ಚಿದ್ದು ಗೃಹಸಚಿವರು ಸಂಬಂಧವೇ ಇಲ್ಲದಂತಿದ್ದಾರೆ. ಬೇಸಿಗೆಯ ಹಿನ್ನಲೆಯಲ್ಲಿ ರಾಜ್ಯ 5ಸಾವಿರಕ್ಕೂ ಅಧಿಕ ಗ್ರಾಮಗಳಲ್ಲಿ ಕುಡಿಯುವ ನೀರಿನ 4

## ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾ ಪಂಚಾಯಿತ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕಾಂದೂ ಪತ್ನಿಗೆ ಹೆರಿಗೆ: ಮಾದರಿಯಾದ ಸಿಇಓ

■ ಕನ್ನಡ ಮಾತೃ ಭೂಮಿ ವಾರ್ತೆ




**ರಾಯಚೂರು,ಏ.30**–ಸರಕಾರಿ ಆಸ್ಪತ್ರೆಯಲ್ಲಿ ಆರ್ಥಿಕವಾಗಿ ದುರ್ಬಲರು ಮಾತ್ರ ಸೇವೆ ಪಡೆಯುತ್ತಾರೆ ಎಂದು ಅಸಡ್ಡೆ ತೋರುವವರಿಗೆ ರಾಯಚೂರು ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಪತ್ನಿಯ ಹೆರಿಗೆಯನ್ನು ರಾಯಚೂರು ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿ ಕಡು ಬಡವರು ಹೆಚ್ಚಿನ ಸಂಖ್ಯೆಯಲ್ಲಿ ಚಿಕಿತ್ಸೆ ಪಡೆಯುವ ತಾಯಿ ಮಕ್ಕಳ ಅಸ್ಪತ್ರೆಯಲ್ಲಿ ಆರೈಕೆ ಪಡೆಯುತ್ತಿದ್ದು, ಇವರ ನಡೆಯಿಂದ ಇತರರಿಗೆ ಮಾದರಿಯಾಗಿದ್ದಾರೆ.

ನಗರದಲ್ಲಿ ಹಲವಾರು ಖಾಸಗಿ ಅಸ್ಪತ್ರೆಗಳಿದ್ದರೂ ಸಹ ಮನಸ್ಸು ಮಾಡದೆ ಸರಕಾರದ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಕೊಠಡಿ, ವಾರ್ಡ್, ನುರಿತ ತಜ್ಞ ವೈದ್ಯರ ಸೇವೆ, ನಿಯಮಿತವಾಗಿ ನಿಗಾ ವಹಿಸುವ ಸಿಬ್ಬಂದಿಗಳ ಸೇವೆಯನ್ನು ಪ್ರತಿಯೊಬ್ಬರೂ ಪಡೆಯಲಿ ಎಂಬ ಸದುದ್ದೇಶದಿಂದ ತಮ್ಮ ಪತ್ನಿಯ ಹೆರಿಗೆಯನ್ನು ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿದ್ದು, ಗಂಡು ಮಗುವಿಗೆ ಜನನ ನೀಡಿದ್ದಾರೆ. ಪ್ರಸ್ತುತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಆಧೀನದ ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆಯಲ್ಲಿದ್ದು, ತಾಯಿ ಮಗು ಅರೋಗ್ಯವಾಗಿ 4

## ಎಸ್‌ಯುಸಿಐ ಸಂಸ್ಥಾಪನಾ ದಿನಾಚರಣೆ : ದೇಶದ ಬಿಕ್ಕಟ್ಟಿಗೆ ಮಾರ್ಕ್ಸವಾದ ಪರಿಹಾರ-ಎಂ.ಶಶಿಧರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.30**–ಜಗತ್ತಿನಾದ್ಯಂತ ಇಂದು ಬಂಡವಾಳ ಶಾಹಿ, ಸಾಮ್ರಾಜ್ಯಶಾಹಿ ದೇಶಗಳಲ್ಲಿ ಆರ್ಥಿಕ ಬಿಕ್ಕಟ್ಟು ತೀವ್ರವಾಗಿದೆ. ಇದರಿಂದ ಹೊರಬರಲು ಸಾಮ್ರಾಜ್ಯಶಾಹಿ ದೇಶಗಳು ತಮ್ಮ ಲಾಭಕ್ಕಾಗಿ ಯುದ್ಧದ ಮೊರೆ ಹೋಗುತ್ತಿವೆ. ಅದರ ಮೂಲಕ ಜನಸಾಮಾನ್ಯರ ಜೀವನವನ್ನು ಕಗ್ಗೋಲೆ ಮಾಡುತ್ತಿವೆ. ಇಂತಹ ಸಂಕೀರ್ಣ ಪರಿಸ್ಥಿತಿಯಲ್ಲಿ ಮಾರ್ಕ್ಸ್ ವಾದಿ ತತ್ವಶಾಸ್ತ್ರ ಪರಿಹಾರವನ್ನು ನೀಡುತ್ತದೆ ಎಂದು ಎಸ್‌ಯುಸಿಐ(ಸಿ) ಪಕ್ಷದ ರಾಜ್ಯ ಸೆಕ್ರೆಟೇರಿಯೇಟ್ ಸದಸ್ಯ ಎಂ.ಶಶಿಧರ ಹೇಳಿದರು.

ಅವರು ನಗರದಲ್ಲಿ ನಡೆದ ಎಸ್‌ಯುಸಿಐ(ಸಿ) ಪಕ್ಷದ 79ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು. ವಿಜ್ಞಾನದ ತಳಹದಿಯ ಮೇಲೆ ನಿಂತಿರುವ ಮಾರ್ಕ್ಸವಾದವು ಸಮಾಜವನ್ನು ಬದಲಾಯಿಸುವ ಮುನ್ನ ವ್ಯಕ್ತಿಗತವಾಗಿ ನಾವು ಬದಲಾಗಬೇಕು. ನಾವು ಸಾಂಸ್ಕೃತಿಕವಾಗಿ ನೈತಿಕವಾಗಿ ಉನ್ನತ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕೆಂದು ಅದು ಬೋಧಿಸುತ್ತದೆ. ಹಾಗಾಗಿಯೇ ಕಾರ್ಲ್ ಮಾರ್ಕ್ಸ್ ಅವರು 'ಜಗತ್ತನ್ನು ಬದಲಾಯಿಸುವ ಮೊದಲು ನಿಮ್ಮನ್ನು ಬದಲಾಯಿಸಿಕೊಳ್ಳಿ' ಎಂದು ಕರೆ ನೀಡಿದರು. ಅಂತಹ ಮಹಾನ್ ತತ್ವಶಾಸ್ತ್ರವನ್ನು ನಮ್ಮ ದೇಶದಲ್ಲಿ ನಿರ್ದಿಷ್ಟವಾಗಿ ಅಳವಡಿಸಿದ ಮಹಾನ್ ಮಾರ್ಕ್ಸ್‌ವಾದಿ ಚಿಂತಕ ಕಾಮ್ರೆಡ್ ಶಿವದಾಸ್ ಘೋಷ್ ಅವರ ಸೈದ್ಧಾಂತಿಕ ಮಾರ್ಗದರ್ಶನದಿಂದ ಮಾತ್ರವೇ ಈ ಅಮಾನವೀಯ ಶೋಷಕ ಬಂಡವಾಳಶಾಹಿ ವ್ಯವಸ್ಥೆಯನ್ನು ಕಿತ್ತೊಗೆದು ಸಮಾಜವಾದಿ ಕ್ರಾಂತಿಯನ್ನು ಯಶಸ್ವಿಗೊಳಿಸಲು ಸಾಧ್ಯ ಎಂದರು. ಮಧ್ಯಪ್ರದೇಶ, ಮಣಿಪುರ, ಒರಿಸ್ಸಾ ಮುಂತಾದ ಹಲವೆಡೆ ರೈತ -ಕಾರ್ಮಿಕರ ಹೋರಾಟಗಳು ಒಂದರ ನಂತರ ಒಂದು ಭುಗಿಲೆಳುತ್ತಿವೆ. ಅಷ್ಟೇ ಅಲ್ಲದೆ, ಯುರೋಪಿಯನ್ ರಾಷ್ಟ್ರಗಳಲ್ಲಿಯೂ ದಮನಕಾರಿ ಆಡಳಿತಗಾರರ ವಿರುದ್ಧ ಜನಾಕ್ರೋಷ 4

## ಮಹರ್ಷಿವಾಲ್ಮೀಕಿ ವಿಶ್ವವಿದ್ಯಾಲಯ ಸಹಾಯಕ ಪ್ರಾಧ್ಯಾಪಕ ನೇಮಕಾತಿಯಲ್ಲಿ ಅಕ್ರಮ ವ್ಯವಹಾರ ದೂರು-ಡಾ.ರವಿಕುಮಾರ

■ ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,ಏ.30**–ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ನೇಮಕಾತಿಯುಲ್ಲಿ ನಿಯಮ ಉಲ್ಲಂಘನೆ, ಬ್ರಷ್ಟಚಾರ ವ್ಯವಹಾರ ನಡೆಯುತ್ತಿದ್ದು ಶೀಘ್ರದಲ್ಲಿಯೇ ಪೋಲಿಸ್ ಹಾಗೂ ಲೋಕಾಯುಕ್ತರಿಗೆ ದಾಖಲೆಗಳೊಂದಿಗೆ ದೂರು ನೀಡುವದಾಗಿ ಕರ್ನಾಟಕ ನಾಯಕರ ಒಕ್ಕೂಟದ ಜಿಲ್ಲಾಧ್ಯಕ್ಷ ಡಾ.ರವಿಕುಮಾರ ಆರೋಪಿಸಿದರು.

ಅವರಿಂದು ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿ, ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ರದ್ದುಪಡಿಸುವಂತೆ ದೂರು ನೀಡಿದ್ದರೂ ಯಾವುದೇ ಉತ್ತರ ವಿಶ್ವವಿದ್ಯಾಲಯ ಇಂದಿಗೂ ನೀಡಿಲ್ಲ. 24 ಸಹಾಯಕ ಪ್ರಾಧ್ಯಾಪಕ ನೇರ ನೇಮಕಾತಿಯಲ್ಲಿ ಹಣ ವ್ಯವಹಾರ ನಡೆಯುತ್ತಿದ್ದು ದಾಖಲೆಯೊಂದಿಗೆ ಎಸ್‌ಪಿಯರಿಗೆ ದೂರು ನೀಡುವದಾಗಿ ಹೇಳಿದರು.


ನೇರನೇಮಕಾತಿ ನಿಯಮಗಳು ಹಾಗೂ ಯುಜಿಸಿ ನಿಯಮಾವಳಿಗಳಂತೆ 3ಎ ಮತ್ತು 3ಬಿ ನೇಮಕಾಥಿ ನಡೆಸಲು ಸೂಚಿಸಲಾಗಿತ್ತು.

ಕುಲಸಚಿವರಿಗೆ ದೂರು ನೀಡಿದ್ದರಿಂದ ಸಂದರ್ಶನದ ದಿನದಂತೆ ನೇಮಕಾತಿ ಪಟ್ಟಿ ಅಪ್ ಲೋಡ್ ಮಾಡದೇ ಹೋಗಿದೆ. ಹಲವಾರು ಸಂಶಯಗಳಿಗೆ ನೇಮಕಾತಿ ಪ್ರಕ್ರಿಯೆ ಗುರಿಯಾಗಿದೆ. ಕುಲಸಚಿವರು, ಕುಲಪತಿಗಳು, ಸುಯಮೀಂದ್ರ ಕುಲ್ಕರ್ಣಿ ಸೇರಿದಂತೆ ಅನೇಕರು ಭಾಗಿಯಾಗಿರುವ ಶಂಕೆಯಿದ್ದು ತನಿಖೆ ನಡೆಸಬೇಕಿದೆ.

ನೇಮಕಾತಿಯಲ್ಲಿ ಪದವಿ, ಪಿಎಚ್‌ಡಿ ಪಡೆದ ಅಬ್ಯರ್ಥಿಗಳನ್ನು ಪರಿಗಣಿಸದೇ ಲಕ್ಷ್ಮೀಕಾಂತ ಎಂಬ ಅನರ್ಹನನ್ನು ಭೌತಶಾಸ್ತ್ರ ಸಹಾಯಕ 4

ಎಸ್‌ಟಿ ಪಟ್ಟಿಯಲ್ಲಿ ಇರದ ಜಾತಿಗಳಿಗೆ ಜಾತಿ ಪ್ರಮಾಣ ನೀಡಲು ರವಿಕುಮಾರ ಹೇಳಿಕೆ

## ರಾಜ್ಯದಾದ್ಯಂತ ಹೋರಾಟ-ರಘುವೀರ ನಾಯಕ ಎಚ್ಚರಿಕೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.30**–ಬಿಜೆಪಿ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಇವರು ತಳವಾರರಿಗೆ ಎಸ್‌ಟಿ ಪ್ರಮಾಣ ಪತ್ರ ನೀಡುವಂತೆ ಒತ್ತಾಯಿಸಿದ್ದು ಯಾವ ಜಾತಿ ತಳವಾರರಿಗೆ ಜಾತಿ ಪ್ರಮಾಣ ಪತ್ರ ನೀಡಬೇಕೆಂದು ಹೇಳದೇ ಜನರನ್ನು ದಾರಿತಪ್ಪಿಸುತ್ತಿದ್ದಾರೆ ಎಂದು ಹೈದ್ರಾಬಾದ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕ ಸಂಘದ ವಿಭಾಗಿಯ ಕಾರ್ಯದರ್ಶಿ ಎನ್.ರಘುವೀರ ನಾಯಕ ಆರೋಪಿಸಿದರು.

ಅವರಿಂದು ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿ, ತಳವಾರ ಮತ್ತು ಪರಿವಾರ ಜಾತಿಗಳನ್ನು ಎಸ್‌ಟಿ ಜಾತಿ ಪಟ್ಟಿಗೆ ಸೇರಿಸಲಾಗಿದೆ. 1991-92 ಸಾಲಿನಲ್ಲಿ ಪರಿಶಿಷ್ಟ ಪಂಗಡ ಉಪಜಾತಿಗಳಾದ ತಳವಾರ, ಪರಿವಾರ ಜಾತಿಗಳು ಪಟ್ಟಿಯಿಂದ ಕೈ ಬಿಟ್ಟು ಹೋಗಿದ್ದರಿಂದ ಸೇರ್ಪಡೆ ಮಾಡಿದ್ದಾರೆ ಹೊರತು ಬೇರೆ ಜಾತಿಗಳಲ್ಲಿರುವ ತಳವಾರ, ಪರಿವಾರ ಜಾತಿ ಜನರನ್ನು ಸೇರ್ಪಡೆ ಮಾಡಿಲ್ಲ. ಸರ್ಕಾರ ಅಧಿಸೂಚನೆಯಲ್ಲಿ ಸ್ಪಷ್ಟವಾಗಿ ಪರಿಶಿಷ್ಟ ಪಂಗಡ ಉಪಜಾತಿಗಳನ್ನು ಉಲ್ಲೇಖಿಸಿ ನಾಯಕ ಸಮುದಾಯ ಉಪಜಾತಿಗಳನ್ನು ಕ್ರಮಸಂಖ್ಯೆ 38 ರಲ್ಲಿ ಸೇರ್ಪಡೆ ಮಾಡಲಾಗಿದೆ. ತಪ್ಪಾಗಿ ಅರ್ಥೈಸಿಕೊಂಡು ಹೇಳಿಕೆ ನೀಡಿರುವದರಿಂದ ಸಮಾಜ ಗಳ ಮಧ್ಯೆ ಸಂಘರ್ಷಕ್ಕೆ ಕಾರಣವಾಗಿದೆ. ಕಳೆದ 30 ವರ್ಷಗಳಿಂದ ನಾಯಕ ಸಮುದಾಯ ಉಪ ಜಾತಿಗಳನ್ನು ಎಸ್‌ಟಿ ಪಟ್ಟಿಗೆ ಸೇರಿಸುವಂತೆ ನಾಯಕ ಸಮಾಜ ಹೋರಾಟ ಮಾಡುತ್ತಲೇ ಬಂದಿದ್ದರಿಂದ ಬಿಜೆಪಿ ಸರ್ಕಾರದ ಅವಧಿಯಲ್ಲಿಯೇ ಸೇರ್ಪಡೆ ಮಾಡಲಾಗಿದೆ. ಇಂತಹ ಗೊಂದಲ ಉಂಟು ಮಾಡುವ ಹೇಳಿಕೆ ನೀಡುವದನ್ನು ಮುಂದುವರೆಸಿದರೆ ರಾಜ್ಯದಾದ್ಯಂತ ಹೋರಾಟ ನಡೆಸುವದಾಗಿ ಹೇಳಿದರು. ಈ ಸಂದರ್ಬದಲ್ಲಿ ರಾಮುನಾಯಕ ,ರಮೇಶ ನಾಯಕ, ಮಹೇಶ ನಾಯಕ, ಮಲ್ಲೇಶ ನಾಯಕ,ರಾಮಕೃಷ್ಣನಾಯಕ ಇದ್ದರು.

## ಬೌರಿಂಗ್ ಆಸ್ಪತ್ರೆ ದುರಂತ; ಜಿಬಿಎ ಆಯುಕ್ತರು ಸೇರಿ ಅಧಿಕಾರಿಗಳ ವಿರುದ್ಧ ಸ್ವಯಂಪ್ರೇರಿತ ಪ್ರಕರಣ, ತನಿಖೆ: ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್

**ಬೆಂಗಳೂರು,ಏ.30**-ಬೌರಿಂಗ್ ಆಸ್ಪತ್ರೆ ಬಳಿ ಕಾಂಪೌಂಡ್ ಕುಸಿದು 7 ಜನ ಮೃತಪಟ್ಟ ದುರಂತದ ಕುರಿತು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಳ್ಳುವುದಾಗಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ತಿಳಿಸಿದ್ದಾರೆ.

ದುರಂತ ಸಂಭವಿಸಿದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಪ್ರತಿಕ್ರಿಯಿಸಿದ ಅವರು, ಮಳೆಯಿಂದ ಬೆಂಗಳೂರಿನ ವಿವಿಧೆಡೆ ಉಂಟಾಗಿರುವ ಅವಾಂತರಗಳನ್ನು ಗಮನದಲ್ಲಿಟ್ಟುಕೊಂಡು ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳು, ಜಿಬಿಎ ಮುಖ್ಯ ಆಯುಕ್ತರು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಐದೂ ಪಾಲಿಕೆಗಳ ಆಯುಕ್ತರ ವಿರುದ್ಧವೂ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುವುದಾಗಿ ಹೇಳಿದ್ದಾರೆ.

ಪ್ರತಿ ಬಾರಿ ಮಳೆ ಬಂದಾಗ ಈ ರೀತಿ ಘಟನೆಗಳು ಆಗುತ್ತಿವೆ. ಹಿಂದೊಮ್ಮೆ ಹೆಬ್ಬಾಳ ರಸ್ತೆಯಲ್ಲಿ ತಾಯಿ-ಮಗು ಮೃತಪಟ್ಟ ಪ್ರಕರಣದ ನಂತರವೂ ಇನ್ನೂ ಎಚ್ಚೆತ್ತಂತಿಲ್ಲ. ಶಿಥಿಲಾವಸ್ಥೆಯ ಕಾಂಪೌಂಡ್ ಪಕ್ಕದಲ್ಲಿ ವ್ಯಾಪಾರ ಮಾಡಲು ಅವಕಾಶ ನೀಡುವುದು ಎಷ್ಟು ಸರಿ? ಮಳೆ ಬಂದಾಗ ಎಷ್ಟು ಸುರಕ್ಷಿತ ಎಂದು ಪಾಲಿಕೆ ಅಧಿಕಾರಿಗಳು ಗಮನ ವಹಿಸಬೇಕಿತ್ತು. ಈ ರೀತಿಯ ಪ್ರಕರಣಗಳು ಭವಿಷ್ಯದಲ್ಲಿ ಆಗಬಾರದು. ಆದ್ದರಿಂದ ಶಿಥಿಲಾವಸ್ಥೆ ತಲುಪಿರುವ ಸಾರ್ವಜನಿಕ ಕಟ್ಟಡಗಳನ್ನ ಗುರುತಿಸಿ, ತೆರವುಗೊಳಿಸುವ ಜವಾಬ್ದಾರಿಯನ್ನ ಅಧಿಕಾರಿಗಳಿಗೆ ನಿಗದಿಗೊಳಿಸಬೇಕಿದೆ. ಸಂಬಂಧಪಟ್ಟ ಅಧಿಕಾರಿಗಳನ್ನ ಕರೆಸಿ ತನಿಖೆ ನಡೆಸಲಿದ್ದೇವೆ ಎಂದು ನ್ಯಾಯಮೂರ್ತಿ ಬಿಎಸ್ ಪಾಟೀಲ್ ಅವರು ತಿಳಿಸಿದರು.

ಪ್ರಾಥಮಿಕ ಮಾಹಿತಿಯನ್ನ ಪಡೆದುಕೊಂಡಿದ್ದೇವೆ. ಕೇವಲ ಒಂದು ಗಂಟೆ ಮಳೆಗೆ ಇಷ್ಟೊಂದು ಸಮಸ್ಯೆಗಳು ಸೃಷ್ಟಿಯಾಗುವುದಾದರೆ ಮಾನ್ಸೂನ್ ಆರಂಭವಾಗುವ ಮುನ್ನ ಜಿಬಿಎ, ಬೆಸ್ಕಾಂ, ಒಳಚರಂಡಿ ಕಾಮಗಾರಿ ಇಲಾಖೆಗಳು ಇದೆಲ್ಲವನ್ನ ಗಮನಿಸುವುದಿಲ್ಲವೇ?. ಕೆಲವೆಡೆ ವಿದ್ಯುತ್ ಪ್ರವಹಿಸಿ ಸಾವುಗಳಾಗಿವೆ. ಕೇವಲ ಬೌರಿಂಗ್ ಆಸ್ಪತ್ರೆಯ ಬಳಿ ಸಂಭವಿಸಿದ ಅವಘಡ ಮಾತ್ರವಲ್ಲ ನಗರದಲ್ಲಿ ಸಂಭವಿಸಿರುವ್ ಎಲ್ಲಾ ಅವಘಡಗಳ ಕುರಿತು ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಅಧಿಕಾರಿಗಳ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಲೋಕಾಯುಕ್ತ ನ್ಯಾಯಮೂರ್ತಿ ಎಚ್ಚರಿಕೆ ನೀಡಿದ್ದಾರೆ.

ಪ್ರಕರಣದ ಹಿನ್ನೆಲೆ: ಬುಧವಾರ ಸಂಜೆ ನಗರದಲ್ಲಿ ಧಾರಾಕಾರ ಮಳೆ ಸುರಿದ ಪರಿಣಾಮ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ಕಾಂಪೌಂಡ್ ಗೋಡೆ ಕುಸಿದು 7 ಜನ ಮೃತಪಟ್ಟಿದ್ದಾರೆ. ತುರ್ತು ಚಿಕಿತ್ಸಾ ವಿಭಾಗದ ಪಕ್ಕದಲ್ಲಿದ್ದ ಗೋಡೆ ಕುಸಿದ ಪರಿಣಾಮ ಪಕ್ಕದ ರಸ್ತೆಯಲ್ಲಿದ್ದ ಫುಟ್‌ಪಾತ್ ಮೇಲೆ ವ್ಯಾಪಾರ ಮಾಡುತ್ತಿದ್ದವರು ಹಾಗೂ ಪಾದಚಾರಿಗಳಲ್ಲಿ ಬಾಲಕಿ ಸಹಿತ 7 ಜನ ಸಾವನ್ನಪ್ಪಿದ್ದಾರೆ. ಕಾಂಪೌಂಡ್ ಗೋಡೆ ಕುಸಿದಿದ್ದರಿಂದ 10ಕ್ಕೂ ಅಧಿಕ ಮಂದಿ ಅವಶೇಷಗಳಡಿ ಸಿಲುಕಿದ್ದರು. ತಕ್ಷಣವೇ ಅಲ್ಲಿದ್ದ ಸಾರ್ವಜನಿಕರು ಕಾರ್ಯಾಚರಣೆ ನಡೆಸಿ ಕೆಲವರನ್ನು ರಕ್ಷಿಸಿದ್ದರು.

## ಗಡಿಪಾರು ಪ್ರಶ್ನಿಸಿದ್ದ ಮಹೇಶ್ ಶೆಟ್ಟಿ ತಿಮರೋಡಿ ಅರ್ಜಿ ವಜಾಗೊಳಿಸಿದ ಹೈಕೋರ್ಟ್; ಸರ್ಕಾರದ ಮುಂದೆ ಮೇಲ್ಮನವಿ ಸಲ್ಲಿಸಲು ಸೂಚನೆ

**ಬೆಂಗಳೂರು,ಏ.30**-ಬೆಳ್ತಂಗಡಿ ವಿದ್ಯಾರ್ಥಿನಿ ಸಾವಿನ ಕುರಿತು ಹೋರಾಟ ನಡೆಸುತ್ತಿರುವ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ಅವರನ್ನು ದಕ್ಷಿಣ ಕನ್ನಡ ಜಿಲ್ಲೆಯಿಂದ ರಾಯಚೂರಿನ ಮಾನ್ವಿ ತಾಲೂಕಿಗೆ ಮೂರನೇ ಬಾರಿಗೆ ಗಡಿಪಾರು ಮಾಡಿ ಹೊರಡಿಸಿದ್ದ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿ ಆದೇಶಿಸಿದೆ.

ತಮ್ಮನ್ನು ಮಾನ್ವಿಗೆ ಗಡಿಪಾರು ಮಾಡಿದ್ದ ಪುತ್ತೂರು ಉಪವಿಭಾಗಾಧಿಕಾರಿಯ ಕ್ರಮವನ್ನು ಪ್ರಶ್ನಿಸಿ ಮಹೇಶ್ ಶೆಟ್ಟಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿ, ತೀರ್ಪು ಕಾಯ್ದಿರಿಸಿದ್ದ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದಂ ಅವರಿದ್ದ ನ್ಯಾಯಪೀಠ, ಇಂದು ತೀರ್ಪು ಪ್ರಕಟಿಸಿತು.

ಅಲ್ಲದೆ, ಉಪವಿಭಾಗಾಧಿಕಾರಿಗಳ ಆದೇಶವನ್ನು ಪ್ರಶ್ನಿಸಿ ಸರ್ಕಾರದ ಗೃಹ ಕಾರ್ಯದರ್ಶಿಗೆ ಮೇಲ್ಮನವಿ ಅರ್ಜಿ ಸಲ್ಲಿಸಬಹುದಾಗಿದೆ. ಆದ್ದರಿಂದ ಅರ್ಜಿ ವಿಚಾರಣೆಗೆ ಊರ್ಜಿತವಲ್ಲ ಎಂದು ತಿಳಿಸಿದ ನ್ಯಾಯಪೀಠ, ಅರ್ಜಿದಾರರು ಸರ್ಕಾರದ ಮುಂದೆ ಮೇಲ್ಮನವಿ ಅರ್ಜಿ ಸಲ್ಲಿಸುವ ಸಲುವಾಗಿ ಮುಂದಿನ ಎರಡು ವಾರಗಳ ಕಾಲ ಕ್ರಮಕ್ಕೆ ಮುಂದಾಗದಂತೆ ನ್ಯಾಯಪೀಠ ಮೌಖಿಕವಾಗಿ ಆದೇಶಿಸಿದೆ. ಆದೇಶದ ವಿಸ್ತೃತ ಪ್ರತಿ ಇನ್ನಷ್ಟೇ ಲಭ್ಯವಾಗಬೇಕಿದೆ.

ವಾದ, ಪ್ರತಿವಾದ: ಅರ್ಜಿಗೆ ಸಂಬಂಧಿಸಿದಂತೆ ಈ ಹಿಂದೆ ನಡೆದಿದ್ದ ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಅರ್ಜಿದಾರರು ಬೆಳ್ತಂಗಡಿ ವಿದ್ಯಾರ್ಥಿನಿ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ನ್ಯಾಯ ದೊರಕಿಸುವುದಕ್ಕೆ ಸಂಬಂಧಿಸಿದಂತೆ ರ್‍ಯಾಲಿಗಳನ್ನು ನಡೆಸಿದ್ದಾರೆ.

ಅಲ್ಲದೆ, ಹೋರಾಟಕ್ಕೆ ಮುಂದೆ ನಿಂತು ಬೆಂಬಲಿಸಿದ್ದಾರೆ. ಇದೇ ಕಾರಣದಿಂದ ಅವರ ವಿರುದ್ಧ ಹಲವು ಮಂದಿ ಕ್ಷುಲ್ಲಕ ಆರೋಪದಲ್ಲಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣಗಳನ್ನು ದಾಖಲಿಸಿದ್ದಾರೆ ಎಂದು ತಿಳಿಸಿದ್ದರು.

ಅಲ್ಲದೆ, ಈ ಹಿಂದೆ ಹೊರಡಿಸಿದ್ದ ಗಡಿಪಾರು ಆದೇಶವನ್ನು ಹೈಕೋರ್ಟ್ ರದ್ದುಪಡಿಸಿದ್ದು, ಹೊಸದಾಗಿ ಆದೇಶಿಸುವುದಕ್ಕೆ ನಿರ್ದೇಶನ ನೀಡಲಾಗಿತ್ತು. ಆದರೆ, ಪುತ್ತೂರು ಉಪವಿಭಾಗಾಧಿಕಾರಿಗಳು ಮತ್ತೊಂದು ಗಡಿಪಾರು ಆದೇಶ ಮಾಡಿದ್ದು, ಈ ಆದೇಶವು ಕರ್ನಾಟಕ ಪೊಲೀಸ್ ಕಾಯ್ದೆಯ ವಿವಿಧ ಸೆಕ್ಷನ್‌ಗಳನ್ನು ಉಲ್ಲಂಘಿಸಿದೆ.

# ರಾಜ್ಯದಲ್ಲಿ ಸದ್ಯಕ್ಕೆ ಸಿಎಂ ಬದಲಾವಣೆ ಇಲ್ಲ-ಖರ್ಗೆ



**ಬೆಂಗಳೂರು,ಏ.30**-ರಾಜ್ಯದಲ್ಲಿ ಸದ್ಯಕ್ಕೆ ಸಿಎಂ ಬದಲಾವಣೆ ಇಲ್ಲ, ನಾಯಕತ್ವ ಬದಲಾವಣೆಯ ಗೊಂದಲ ಶೀಘ್ರದಲ್ಲಿ ಯೇ ಬಗೆಹರಿಯಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿ ದ್ದಾ ರೆ. ಈ ಮೂಲಕ ಕಳೆದ ಒಂದು ವರ್ಷದಿಂದ ಕೇಳಿಬರುತ್ತಿದ್ದ ಸಿಎಂ ಬದಲಾವಣೆ ವದಂತಿಗೆ ಹೈಕಮಾಂಡ್ ತೆರೆ ಎಳೆದಂತಾಗಿದೆ.

ಇಂದು ಕಲಬುರಗಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾ ಡಿದ ಮಲ್ಲಿಕಾರ್ಜುನ ಖರ್ಗೆ, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಗೊಂದಲ ಗಳಿರುವುದು ನಿಜ, ಅದು ಶೀಘ್ರವೇ ಬಗೆಹರಿಯಲಿದೆ. ನಾನು ಸಿಎಂ ಆಗಬೇಕೆಂದು ಕೆಲವರು ಹೇಳು ತ್ತಾರೆ, ನೀವು ಮಾಧ್ಯಮದವರು ಕೂಡ ಆಗಾಗ ಆ ವಿಷಯ ಬಗ್ಗೆ ಮಾತನಾಡುತ್ತಿರುತ್ತೀರಿ, ಆದರೆ ಕಾಂಗ್ರೆಸ್ ಪಕ್ಷದಲ್ಲಿ ಸಿದ್ಧಾಂತ ಮತ್ತು ದಶಕಗಳ ದುಡಿಮೆ ಮುಖ್ಯ ಎಂದರು.

ಪ್ರಸ್ತುತ ರಾಜ್ಯದಲ್ಲಿ ಮುಖ್ಯಮಂತ್ರಿಗಳಿದ್ದಾರೆ, ಚೆನ್ನಾಗಿ ಕೆಲಸ ಮಾಡಿಕೊಂಡು ಹೋಗುತ್ತಿದ್ದಾರೆ. ಹೀಗಾಗಿ ಸಿಎಂ ಬದಲಾವಣೆ ಚರ್ಚೆ ಸದ್ಯಕ್ಕೆ ಉದ್ಭವಿಸುವುದಿಲ್ಲ. ಒಂದು ವೇಳೆ ಅಂತಹ ಸಂದರ್ಭ ಬಂದರೆ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಯವರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತೇವೆ. ಅದಕ್ಕೆ ಸಮಯ ಹಿಡಿಯು ತ್ತದೆ, ಆ ಸಮಯ ಬಂದಾಗ ನೋಡೋಣ ಎಂದರು.

ಕರ್ನಾಟಕದಲ್ಲಿ ಸಿಎಂ ಬದಲಾವಣೆ ಮಾಡಬೇಕೆಂದು ಸೋನಿಯಾ ಗಾಂಧಿಯವರು, ರಾಹುಲ್ ಗಾಂಧಿಯವರು ನಿರ್ಣಯ ತೆಗೆದುಕೊಂಡರೆ ಸಮಯ ಹಿಡಿಯುತ್ತದೆ. ನಾನು ಸಿಎಂ ಆದರೆ ಉತ್ತಮ ಎಂದು ಅವರು ಹೇಳುತ್ತಾರೆ, ನೀವು ಹೇಳುತ್ತೀರಿ, ಮೇಲಿನವರೂ ಹೇಳುತ್ತಾರೆ, ಆದರೆ ನಮ್ಮ ಹಣೆಬರಹ ಅನ್ನುವುದಕ್ಕಿಂತ ಪಕ್ಷದ ಸಿದ್ಧಾಂತ ಪ್ರಕಾರ ನಿರ್ಣಯಗಳನ್ನು ತೆಗೆದುಕೊಳ್ಳುತ್ತಾರೆ, ಅದನ್ನು ಹೆಚ್ಚಾಗಿ ಸೋನಿಯಾ ಗಾಂಧಿಯವರು ನಿರ್ಧರಿಸುತ್ತಾರೆ ಎಂದರು.

ಪಂಚ ರಾಜ್ಯಗಳ ಚುನಾವಣೆ ಹಾಗೂ ಕರ್ನಾಟಕದಲ್ಲಿ ಉಪ ಚುನಾವಣೆ ಮುಗಿದು ಫಲಿತಾಂಶಕ್ಕೆ ದಿನಗಣನೆ ಆರಂಭವಾಗಿರುವ ಸಂದರ್ಭದಲ್ಲಿ ಕಾಂಗ್ರೆಸ್ ನಲ್ಲಿ ಕಳೆದೊಂದು ವಾರದಿಂದ ಚಟುವಟಿಕೆ ಗರಿಗೆದರಿದೆ. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ ಕೆ ಶಿವಕುಮಾರ್ ಬಣದ ಸಚಿವರು, ಶಾಸಕರು ಹೇಳಿಕೆಗಳನ್ನು ನೀಡುತ್ತಾ ಹೈಕಮಾಂಡ್ ಏನು ತೀರ್ಮಾನ ಕೈಗೊಳ್ಳುತ್ತದೆ ಎಂದು ಕಾತರದಿಂದ ಕಾಯುತ್ತಿದ್ದಾರೆ.

ಈ ಸಂದರ್ಭದಲ್ಲಿ ಇಂದು ಮಲ್ಲಿಕಾರ್ಜುನ ಖರ್ಗೆಯವರ ಹೇಳಿಕೆ ಮೇ 15ರೊಳಗೆ ಡಿಕೆ ಶಿವಕುಮಾರ್ ಅವರ ಹುಟ್ಟುಹಬ್ಬಕ್ಕೆ ಹೈಕಮಾಂಡ್ ಗಿಫ್ಟ್ ನೀಡುತ್ತದೆ ಎಂದು ಆಸೆಪಟ್ಟವರಿಗೆ ತಣ್ಣೀರೆರಚಿದಂತಾಗಿದೆ.

ಬೌರಿಂಗ್ ಆಸ್ಪತ್ರೆಯ ಕಂಪೌಂಡ್ ಕುಸಿತ ಪ್ರಕರಣ ಬಗ್ಗೆ ಮಾತನಾಡಿದ ಅವ ರು, ಅದು ಹಳೆಯ ಕಾಂಪೌಂಡ್ ಆಗಿತ್ತು. ಎರಡನೆಯದಾಗಿ, ಅದನ್ನು ಸರಿಯಾಗಿ ನಿರ್ಮಿಸಲಾಗಿರಲಿಲ್ಲ. ಕೆಲವೆಡೆ ಮಣ್ಣಿನ ಗೋಡೆಗಳು, ಇನ್ನೂ ಕೆಲವೆಡೆ ಇಟ್ಟಿಗೆಯ ಗೋಡೆಗಳು ಇರುವುದನ್ನು ನಾನು ಗಮನಿಸಿ ದ್ದೇನೆ. ಕಾಂಪೌಂಡ್‌ನ ಒಂದು ಭಾಗವನ್ನು ದುರಸ್ತಿಪಡಿಸಬೇಕು ಪಕ್ಕದಲ್ಲಿ ಕೂತು ವ್ಯಾಪಾರ ಮಾಡುತ್ತಿದ್ದವರಿಗೆ ತಕ್ಕ ಪರಿಹಾರ ನೀಡಬೇಕು ಎಂದರು. ಮುಂದೆ ಯಾರೂ ಕಾಂಪೌಂಡ್‌ಗೆ ತಾಗಿಕೊಂಡೇ ಕೂತು ವ್ಯಾಪಾರ ಮಾಡಲು ಅವಕಾಶ ನೀಡಬಾರದು. ಇಂದು ಬೆಂಗಳೂರಿನಲ್ಲಿ ನಡೆ ದಂತಹ ಘಟನೆ ನಾಳೆ ಇನ್ನೊಂದು ಕಡೆ ನಡೆಯಬಹುದು; ಸರ್ಕಾರ ಜಾಗ್ರತೆ ವಹಿಸಿ, ಈ ಗಿಗ್ ಕಾರ್ಮಿಕರು ಅಥವಾ ಸಣ್ಣ ವ್ಯಾಪಾರಿಗಳಿಗೆ ಸಾಧ್ಯವಾದಷ್ಟು ಸಹಾಯ ಮಾಡಬೇಕು ಎಂದರು.

- **ವದಂತಿಗೆ ತೆರೆ**
  - ಕಳೆದ 1 ವರ್ಷದ ಸಿಎಂ ಬದಲಾವಣೆ ಚರ್ಚೆಗೆ ತೆರೆ
  - ಹೈಕಮಾಂಡ್ ಸ್ಪಷ್ಟ ಸಂದೇಶ
- **ನಾಯಕತ್ವ ವಿಚಾರ**
  - ಕಾಂಗ್ರೆಸ್‌ನಲ್ಲಿ ಸಿದ್ಧಾಂತ ಪ್ರಮುಖ
  - ವೈಯಕ್ತಿಕ ಆಸೆಗಿಂತ ಪಕ್ಷದ ನಿರ್ಧಾರ ಮುಖ್ಯ
- **ಪ್ರಸ್ತುತ ಸ್ಥಿತಿ**
  - ರಾಜ್ಯದಲ್ಲಿ ಈಗಿನ ಸಿಎಂ ಉತ್ತಮವಾಗಿ ಕೆಲಸ
  - ಹೀಗಾಗಿ ಬದಲಾವಣೆ ಚರ್ಚೆ ಇಲ್ಲ
- **ರಾಜಕೀಯ ಚಟುವಟಿಕೆ**
  - ಪಂಚ ರಾಜ್ಯ ಚುನಾವಣೆ ಹಿನ್ನೆಲೆ
  - ಕಾಂಗ್ರೆಸ್‌ನಲ್ಲಿ ಚಟುವಟಿಕೆ ಹೆಚ್ಚಳ
- **ಡಿಕೆ ಶಿವಕುಮಾರ್ ಹುಟ್ಟುಹಬ್ಬ**
  - ಮೇ 15ಕ್ಕೆ ಗಿಫ್ಟ್ ನಿರೀಕ್ಷೆ ಕುಸಿತ
  - ಖರ್ಗೆ ಹೇಳಿಕೆಯಿಂದ ತಣ್ಣೀರು
- **ಬೌರಿಂಗ್ ಆಸ್ಪತ್ರೆ ಘಟನೆ**
  - ಹಳೆಯ ಕಾಂಪೌಂಡ್ ಕುಸಿತ ಕಾರಣ
  - ನಿರ್ಮಾಣ ದೋಷಗಳ ಸೂಚನೆ

## ಬೌರಿಂಗ್ ಆಸ್ಪತ್ರೆ ಅವಘಡ: ಕಾರ್ಯಪಾಲಕ ಇಂಜಿನಿಯರ್ ಅಮಾನತಿಗೆ ಸಿಎಂ ಸಿದ್ದರಾಮಯ್ಯ ಸೂಚನೆ



**ಬೆಂಗಳೂರು,ಏ.30**-ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಕುಸಿದು ಬುಧವಾರ ಸಂಜೆ ಏಳು ಜನರ ಸಾವಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ, ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್ ಅವರನ್ನು ಅಮಾನತುಗೊಳಿಸಿ, ನೋಟಿಸ್ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ.

ಭಾರಿ ಮಳೆಯಿಂದ ಬೌರಿಂಗ್ ಆಸ್ಪತ್ರೆ ದುರಂತದ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ವಿಧಾನಸೌಧದಲ್ಲಿ ಜಿಬಿಎ ಆಯುಕ್ತರುಗಳ ಸಭೆ ನಡೆಯಿತು. ಬೆಂಗಳೂರಿನಲ್ಲಿ ಮಳೆಯಿಂದ ಉಂಟಾಗಿರುವ ಹಾನಿ ಹಾಗೂ ಬೌರಿಂಗ್ ಆಸ್ಪತ್ರೆ ಗೋಡೆ ಕುಸಿತದಿಂದ ನಿನ್ನೆ ಏಳು ಜನ ಮೃತಪಟ್ಟಿರುವ ಕುರಿತಂತೆ ಜಿಬಿಎ ಆಯುಕ್ತರೊಂದಿಗೆ ಚರ್ಚಿಸಿದ ಮುಖ್ಯಮಂತ್ರಿಗಳು, ಗೋಡೆಗೆ ಹಾನಿ ಆಗಲಿದೆ ಎಂದು ತಿಳಿದಿದ್ದರೂ ಕಾಮಗಾರಿ ನಡೆಯುವಾಗ ಮಣ್ಣು ಸುರಿದದ್ದು ಏಕೆ ಎಂದು ಪ್ರಶ್ನಿಸಿದರು.

ಗೋಡೆಗೆ ಹಾನಿಯಾಗುವಂತೆ ಮಣ್ಣು ಸುರಿದದ್ದು ನೀವು ಏಕೆ ನೋಡಿಕೊಳ್ಳಲಿಲ್ಲ ಎಂದು ಆಸ್ಪತ್ರೆ ಮುಖ್ಯಸ್ಥರನ್ನು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರಿಗೆ ನೋಟಿಸ್ ನೀಡಲು ಸೂಚಿಸಿದ ಮುಖ್ಯಮಂತ್ರಿಗಳು, ಬೆಂಗಳೂರಿನಲ್ಲಿ ಗುಂಡಿಗಳನ್ನು ಮುಚ್ಚಲು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

**ಸಿಎಂ ಸಿದ್ದರಾಮಯ್ಯ ಸಭೆ ನಡೆಸುತ್ತಿರುವುದು :** ನಿನ್ನೆ ಬೆಂಗಳೂರಿನಲ್ಲಿ ಉಂಟಾದ ಮಳೆಯಲ್ಲಿ ಸಾಕಷ್ಟು ಹಾನಿಯಾಗಿದ್ದು, 250ಕ್ಕೂ ಹೆಚ್ಚು ಮರಗಳು ಬಿದ್ದಿವೆ. ಏಳು ಜನ ಸಾವನ್ನಪ್ಪಿದ್ದಾರೆ. ಈಗಾಗಲೇ ಮೃತಪಟ್ಟವರ ಕುಟುಂಬದವರಿಗೆ ತಲಾ 5 ಲಕ್ಷ ರೂ. ಪರಿಹಾರ ಘೋಷಣೆ ಮಾಡಲಾಗಿದೆ. ಗಾಯಗೊಂಡವರಿಗೆ ಉಚಿತ ಚಿಕಿತ್ಸೆ ನೀಡುವಂತೆ ಸೂಚಿಸಿದರು.

ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಸಿದ್ಧತೆ ಕೈಗೊಳ್ಳಿ: ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಬೆಂಗಳೂರಿನ ಐದೂ ವಲಯಗಳ ಆಯುಕ್ತರು ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕು. ಒಣಗಿರುವ ಅಪಾಯಕಾರಿ ಮರಗಳ ರೆಂಬೆಗಳನ್ನು ಕತ್ತರಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು. ಮುಂದಿನ ದಿನಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಗಳಿದ್ದು, ರಾಜಕಾಲುವೆಗಳಲ್ಲಿ ಹೂಳು ತೆಗೆಯುವುದು, ಪ್ರವಾಹ ಉಂಟಾಗದಂತೆ ಕ್ರಮ ತೆಗೆದುಕೊಳ್ಳಬೇಕು. ಮಳೆಯಿಂದ ರಸ್ತೆಯಲ್ಲಿ ಬಿದ್ದಿರುವ ಕಸ, ರೆಂಬೆಗಳನ್ನು ಕೂಡಲೇ ತೆರವು ಮಾಡಬೇಕು. ಅಂಡರ್ ಪಾಸ್‌ಗಳಲ್ಲಿ ಮಳೆ ನೀರು ನಿಲ್ಲದಂತೆ ಹಾಗೂ ಜನರು ಅಂಡರ್‌ಪಾಸ್ ಬಳಸದಂತೆ ಕೂಡಲೇ ಬ್ಯಾರಿಕೇಡ್ ಹಾಕಿ ಎಂದು ಸಿಎಂ ಸೂಚಿಸಿದರು. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಶಾಸಕ ರಿಜ್ವಾನ್ ಅರ್ಷದ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ ರಾವ್ ಹಾಗೂ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಅಂಜುಮ್ ಪರ್ವೇಜ್, ಮೊದಲಾದವರು ಉಪಸ್ಥಿತರಿದ್ದರು.

## ಹಾಸನ: ಪ್ರೀ ವೆಡ್ಡಿಂಗ್ ಶೂಟ್‌ಗೆ ಹೊರಟ ಭಾವಿ ವರ ಅಪಘಾತದಲ್ಲಿ ಸಾವು ನಾಲೆಗೆ ಕಾರು ಬಿದ್ದು ತಾಯಿ-ಮಗು ಮೃತ

**ಹಾಸನ,ಏ.30**-ಇನ್ನೇನು 10 ದಿನಗಳಲ್ಲಿ ಹಸೆಮಣೆ ಏರಬೇಕಿದ್ದ ಯುವಕನೋರ್ವ, ಪ್ರೀ ವೆಡ್ಡಿಂಗ್ ಶೂಟ್‌ಗೆ ಹೋಗುತ್ತಿದ್ದ ವೇಳೆ ಸಂಭವಿಸಿದ ಕಾರು ಅಪಘಾತದಲ್ಲಿ ಮೃತಪಟ್ಟಿದ್ದಾನೆ. ಜಿಲ್ಲೆಯ ಸಕಲೇಶಪುರ ತಾಲೂಕಿನ ಮೂಗಲಿ ಗ್ರಾಮದ ಬಳಿ ಗುರುವಾರ (ಇಂದು) ಬೆಳಗ್ಗೆ ಈ ಘಟನೆ ಸಂಭವಿಸಿದೆ.

ಬೇಲೂರು ತಾಲೂಕಿನ ಲಕ್ಕುಂದ ಗ್ರಾಮದ ದರ್ಬಾರ್ ಪೇಟೆ ನಿವಾಸಿ ಮನು ಎಲ್.ಎನ್. ಅಪಘಾತದಲ್ಲಿ ಮೃತಪಟ್ಟ ಯುವಕ. ಮೇ 10, 2026ರಂದು ಮನು ವಿವಾಹ ನಿಶ್ಚಯವಾಗಿತ್ತು. ಭಾವಿ ವರ ಸಾವಿಗೀಡಾಗಿರುವುದು ಮದುವೆ ಮನೆಯ ಸಂಭ್ರಮದಲ್ಲಿರಬೇಕಾದ ಕುಟುಂಬದಲ್ಲಿ ಸೂತಕದ ಛಾಯೆ ಆವರಿಸಿದೆ. ಮದುವೆಗೆ ಭರದಿಂದ ಸಿದ್ಧತೆ ನಡೆದಿದ್ದು, ಪ್ರೀ ವೆಡ್ಡಿಂಗ್ ಶೂಟ್‌ಗೆಂದು ಭಾವಿ ಪತ್ನಿಯನ್ನು ಕರೆ ತರಲು ಕಾರಿನಲ್ಲಿ ಮನು ಹೋಗುತ್ತಿದ್ದರು. ಈ ವೇಳೆ ಮೂಗಲಿ ಬಳಿ ಕಾರು ನಿಯಂತ್ರಣ ತಪ್ಪಿ ಮರಕ್ಕೆ ಡಿಕ್ಕಿ ಹೊಡೆದಿದ್ದು, ಅಪಘಾತದ ರಭಸಕ್ಕೆ ಯುವಕ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.

# ಗಂಗಾವತಿ ಬಿಜೆಪಿ ಮುಖಂಡನ ಕೊಲೆ ಪ್ರಕರಣ: ಆರು ಅಪರಾಧಿಗಳಿಗೆ ಗಲ್ಲು ಶಿಕ್ಷೆ ವಿಧಿಸಿದ ಕೋರ್ಟ್



**ಕೊಪ್ಪಳ,ಏ.30**-ಬಿಜೆಪಿ ಯುವ ಮೋರ್ಚಾದ ನಗರ ಘಟಕದ ಅಧ್ಯಕ್ಷ ವೆಂಕಟೇಶ ಕುರುಬರ್ ಅಲಿಯಾಸ್ ಜೆಎನ್‌ಎನ್ ವೆಂಕಿ ಕೊಲೆ ಪ್ರಕರಣದಲ್ಲಿ ಭಾಗಿಯಾಗಿದ್ದ ಆರು ಜನ ಅಪರಾಧಿಗಳಿಗೆ ಗಲ್ಲು ಶಿಕ್ಷೆ ವಿಧಿಸಿ ಇಲ್ಲಿನ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಮಹತ್ವದ ತೀರ್ಪು ಪ್ರಕಟಿಸಿದೆ.

ಪ್ರಕರಣ ಸಂಬಂಧ ವಿಚಾರಣೆ ನಡೆಸಿದ ನ್ಯಾಯಾಧೀಶ ಸದಾನಂದ ನಾಗಪ್ಪ ನಾಯ್ಕ್ ಅವರು ಶಿಕ್ಷೆ ತೀರ್ಪು ಪ್ರಕಟಿಸಿದರು. ರವಿ, ಮೈಲಾರಿ, ಧನರಾಜ್, ಭೀಮಾ, ಸಲೀಂ ಮತ್ತು ಗಂಗಾಧರ ಗೌಳಿ ಶಿಕ್ಷೆಗೊಳಗಾದ ಅಪರಾಧಿಗಳು.

ಮೊದಲಿಗೆ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಸಿಟಿವಿಯ ಫೂಟೇಜ್‌ಗಳನ್ನು ಪರಿಶೀಲಿಸಿದ ನ್ಯಾಯಾಧೀಶ ಸದಾನಂದ ನಾಗಪ್ಪ ನಾಯ್ಕ್, ಅಪರಾಧಿಗಳು ಈ ಹಿಂದೆ ವಿವಿಧ ಪ್ರಕರಣಗಳಲ್ಲಿ ಭಾಗಿಯಾದ ಹಿನ್ನೆಲೆಯ ಬಗ್ಗೆಯೂ ಪರಿಶೀಲನೆ ನಡೆಸಿದರು.

ಗಂಗಾವತಿಯ ರೈಲ್ವೆ ನಿಲ್ದಾಣದ ಬಳಿ ನಡೆದಿದ್ದ ಮಾರುತಿ ಎಂಬ ಯುವಕನ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ ಪ್ರಕರಣದಲ್ಲಿ ವೆಂಕಟೇಶ ಪ್ರತ್ಯಕ್ಷ ಸಾಕ್ಷಿಯಾಗಿದ್ದರು. ಅಲ್ಲದೇ ಮಾರುತಿ ಚಿಕಿತ್ಸೆಗೆ ಕೊನೆಯವರೆಗೂ ಬೆಂಬಲವಾಗಿ ನಿಂತಿದ್ದ ಎಂಬ ಕಾರಣಕ್ಕೆ ವೆಂಕಟೇಶನನ್ನು ಕೊಲೆ ಮಾಡಿದ್ದೀರಿ. ಸಭ್ಯ ನಾಗರಿಕ ಸಮಾಜದ ಇಂತಹ ಕೃತ್ಯಗಳನ್ನು ಒಪ್ಪುವುದಿಲ್ಲ. ಅಪರಾಧ ಕೃತ್ಯಗಳ ಹಿನ್ನೆಲೆ ಪರಿಗಣಿಸಿ ಗಲ್ಲು ಶಿಕ್ಷೆ ವಿಧಿಸಲಾಗಿದೆ ಎಂದು ನ್ಯಾಯಾಧೀಶರು ತೀರ್ಪು ಪ್ರಕಟಿಸಿದರು. ವೆಂಕಟೇಶ್ ಅವರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದ ಪ್ರಕರಣ ಸಂಬಂಧ ಆರು ಜನ ಅರೋಪಿಗಳನ್ನು ದೋಷಿ ಎಂದು ಈ ಹಿಂದೆ ಕೋರ್ಟ್ ತೀರ್ಪು ನೀಡಿ, ಶಿಕ್ಷೆ ಪ್ರಮಾಣ ಕಾಯ್ದಿರಿಸಿತ್ತು. ಅಂತೆಯೇ ಇಂದು ನ್ಯಾಯಾಧೀಶರು, ಆರು ಜನರಿಗೆ ಮರಣದಂಡನೆ ವಿಧಿಸಿ ತೀರ್ಪು ನೀಡಿದ್ದಾರೆ. ಅಪರಾಧಿಗಳು ಅಗತ್ಯವಿದ್ದರೆ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬಹುದು ಎಂದು ನ್ಯಾಯಾಧೀಶರು ಸಲಹೆಯಲ್ಲಿ ತಿಳಿಸಿದ್ದಾರೆ ಎಂದು ಸರ್ಕಾರಿ ಅಭಿಯೋಜಕಿ ಎಸ್. ನಾಗಲಕ್ಷ್ಮಿ ಮಾಹಿತಿ ನೀಡಿದರು.

ಅಕ್ಟೋಬರ್ 7 2025 ರ ತಡರಾತ್ರಿ ಊಟ ಮುಗಿಸಿಕೊಂಡು ಸ್ನೇಹಿತರೊಂದಿಗೆ ದ್ವಿಚಕ್ರ ವಾಹನದಲ್ಲಿ ವೆಂಕಟೇಶ ತೆರಳುತ್ತಿದ್ದ ಸಂದರ್ಭದಲ್ಲಿ ಕಾರಿನಲ್ಲಿ ಹಿಂಬಾಲಿಸಿದ ಯುವಕರ ಗುಂಪು, ದ್ವಿಚಕ್ರ ವಾಹನಕ್ಕೆ ಗುದ್ದಿ ಬೀಳಿಸಿದ್ದರು.

ಬಳಿಕ ಕೆಳಕ್ಕೆ ಬಿದ್ದ ವೆಂಕಟೇಶನ ಮೇಲೆ ಮಾರಕಾಯುಧಗಳಿಂದ ದಾಳಿ ಮಾಡಿ ಮನಬದಂತೆ ಕೊಚ್ಚಿ ಕೊಲೆ ಮಾಡಿದ್ದರು.

ತೀವ್ರವಾಗಿ ಗಾಯಗೊಂಡು ರಕ್ತದ ಮಡುವಿನಲ್ಲಿ ಬಿದ್ದಿದ್ದ ವೆಂಕಟೇಶನನ್ನು ಸರ್ಕಾರಿ ಉಪ ವಿಭಾಗ ಆಸ್ಪತ್ರೆಗೆ ಮಧ್ಯರಾತ್ರಿ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದರು.

## ಬೇಸಿಗೆ ಹೊತ್ತಲ್ಲೇ ಬಂಡೀಪುರದಲ್ಲಿ ಅರಣ್ಯ ಇಲಾಖೆ ಹಂಗಾಮಿ ನೌಕರರಿಂದ ಮುಷ್ಕರ



**ಚಾಮರಾಜನಗರ,ಏ.30**-ಹೊರಗುತ್ತಿಗೆ ರದ್ದುಪಡಿಸಿ, ಅರಣ್ಯ ಇಲಾಖೆಯಿಂದಲೇ ವೇತನ ನೀಡುವುದು, ಸೇವಾ ಭದ್ರತೆ ಒದಗಿ ಸುವುದು ಸೇರಿದಂತೆ, ವಿವಿಧ ಬೇಡಿಕೆ ಗಳನ್ನು ಈಡೇರಿಸುವಂತೆ ಆಗ್ರಹಿಸಿ, ಅರಣ್ಯ ಇಲಾಖೆಯ ವನ್ಯಜೀವಿ ವಿಭಾಗದ ಹಂಗಾಮಿ ನೌಕರರು ಗುಂಡ್ಲುಪೇಟೆ ತಾಲೂಕಿನ ಬಂಡೀಪುರದ ಸಫಾರಿ ಕೇಂದ್ರದ ಆವರಣದಲ್ಲಿ ಇಂದಿನಿಂದ ಮುಷ್ಕರ ಆರಂಭಿಸಿದ್ದಾರೆ.

ಹೊರಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಎ. ಎಂ. ನಾಗರಾಜು ನೇತೃತ್ವದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಬಂದಿದ್ದ 500ಕ್ಕೂ ಅಧಿಕ ನೌಕರರು ಪ್ರತಿಭಟನೆ ನಡೆಸಿ ಬೇಡಿಕೆ ಈಡೇರಿಸಲು ಒತ್ತಾಯಿಸಿದರು.

ರಾಜ್ಯದಲ್ಲಿ ವನ್ಯಜೀವಿ, ಪ್ರಾದೇಶಿಕ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಸೇವೆ ಸಲ್ಲಿ ಸುತ್ತಿರುವ 4,000ಕ್ಕೂ ಅಧಿಕ ಹಂಗಾಮಿ ನೌಕರರು ಕಳೆದ ನವೆಂಬರ್‌ನಲ್ಲಿ ಪ್ರತಿಭಟನೆ ನಡೆಸಿದ್ದರು. ಆಗ ನೌಕರರ ಬೇಡಿಕೆಗಳನ್ನು ಈಡೇರಿಸುವ ಭರವಸೆಯನ್ನು ಸರ್ಕಾರ ನೀಡಿತ್ತು. ಆದರೆ, ಇದುವರೆಗೂ ಸರ್ಕಾರದಿಂದ ಸ್ಪಂದನೆ ಸಿಕ್ಕಿಲ್ಲ ಎಂದು ಆರೋಪಿಸಿ ಬಂಡೀಪುರದಲ್ಲಿ ಇಂದಿನಿಂದ ಮುಷ್ಕರ ಆರಂಭಿಸಿದರು.

ಅರಣ್ಯ ಸಚಿವ ಈಶ್ವರ್ ಖಂಡ್ರೆ ಬೇಡಿಕೆ ಈಡೇರಿಸಲು ಸ್ಪಂದಿಸಿದರೂ ಹಿರಿಯ ಅಧಿಕಾರಿಗಳು ಇದಕ್ಕೆ ಪೂರಕವಾಗಿ ಸ್ಪಂದಿಸುತ್ತಿಲ್ಲ. ಈ ಹಿಂದೆ ಎರಡು ಬಾರಿ ಪ್ರತಿಭಟನೆ ನಡೆಸಿದರೂ ಬರೀ ಭರವಸೆ ಬಿಟ್ಟರೆ ಏನೂ ಬದಲಾವಣೆ ಆಗಿಲ್ಲ. ಸರ್ಕಾರದಿಂದ ಲಿಖಿತ ಭರವಸೆ ಸಿಗುವವರೆಗೂ ಈ ಬಾರಿ ಮುಷ್ಕರ ನಿಲ್ಲಿಸಲ್ಲ ಎಂದು ಕರ್ನಾಟಕ ರಾಜ್ಯ ಅರಣ್ಯ ಇಲಾಖೆ ವನ್ಯಜೀವಿ ಘಟಕಗಳ ದಿನಗೂಲಿ ಅಧ್ಯಕ್ಷ ನಾಗರಾಜು ಎಚ್ಚರಿಸಿದ್ದಾರೆ.

ಮೊದಲು ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಹಂಗಾಮಿ ನೌಕರರಿಗೆ ವೇತನ ಹಾಗೂ ಸೌಲಭ್ಯ ನೀಡಲಾಗುತ್ತಿತ್ತು. 2017ರಲ್ಲಿ ಅದನ್ನು ಬದಲಾಯಿಸಿ ಟೆಂಡರ್ ಮೂಲಕ ಏಜೆನ್ಸಿಗಳಿಂದ ವೇತನ ನೀಡಲಾಗುತ್ತಿದೆ. ಇದರಿಂದ ಸರಿಯಾಗಿ ವೇತನವೂ ಸಿಗುತ್ತಿಲ್ಲ. ಸೌಲಭ್ಯಗಳನ್ನು ಪಡೆಯುವುದು ಕಷ್ಟವಾಗಿದೆ. ಹೀಗಾಗಿ, ಇದನ್ನು ಬದಲಾಯಿಸಿ ಎಂಬುದು ಪ್ರಮುಖ ಬೇಡಿಕೆಯಾಗಿದೆ. ಏಪ್ರಿಲ್ 1 ರಿಂದ ಮುಂದಿನ ಒಂದು ವರ್ಷದ ಗುತ್ತಿಗೆ ಕರಾರಿಗೆ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಇದು ಜಾರಿಯಾದರೆ ನಮ್ಮ ಪ್ರಮುಖ ಸಮಸ್ಯೆ ಬಗೆಹರಿಯವುದಿಲ್ಲ.

## ಅತ್ಯಾಚಾರ ಸಂತ್ರಸ್ತೆ ಅಪಹರಣ ಪ್ರಕರಣ ರದ್ದು ಕೋರಿದ್ದ ಅರ್ಜಿ ಹಿಂಪಡೆದ ಹೆಚ್.ಡಿ.ರೇವಣ್ಣ



**ಬೆಂಗಳೂರು,ಏ.30**-ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರಿಂದ ಅತ್ಯಾಚಾರಕ್ಕೆ ಒಳಗಾದ ಸಂತ್ರಸ್ತೆಯನ್ನು ಅಪಹರಿಸಿದ ಆರೋಪ ಸಂಬಂಧ ತಮ್ಮ ವಿರುದ್ಧದ ವಿಚಾರಣೆಯನ್ನು ಕಾನೂನು ರೀತಿ ಮುಂದುವರೆಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಶಾಸಕ ಹೆಚ್.ಡಿ. ರೇವಣ್ಣ ಅವರು ಪ್ರಕರಣ ರದ್ದು ಕೋರಿದ್ದ ಅರ್ಜಿಯನ್ನು ಹಿಂಪಡೆದುಕೊಂಡಿದ್ದಾರೆ.

ಪ್ರಕರಣ ಸಂಬಂಧ ಮೈಸೂರು ಜಿಲ್ಲೆಯ ಕೆ.ಆರ್. ಪೇಟೆ ಠಾಣೆಗೆ ಸಂತ್ರಸ್ತೆಯ ಪುತ್ರ ನೀಡಿದ್ದ ದೂರಿನ ತನಿಖೆ ನಡೆಸಿದ್ದ ಸಿಐಡಿ ಪೊಲೀಸರು, ತಮ್ಮ ವಿರುದ್ಧ ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಿರುವ ಆರೋಪಪಟ್ಟಿ ರದ್ದು ಕೋರಿ ಹೆಚ್.ಡಿ. ರೇವಣ್ಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುನೀಲ್ ದತ್ ಯಾದವ್ ಅವರಿದ್ದ ನ್ಯಾಯಪೀಠ ಕಾನೂನು ರೀತಿಯಲ್ಲಿ ವಿಚಾರಣೆ ಮುಂದುವರೆಸುವಂತೆ ಆದೇಶ ನೀಡಿತ್ತು.

ಅರ್ಜಿಗೆ ಸಂಬಂಧಿಸಿದಂತೆ ವಿಚಾರಣೆ ವೇಳೆ ರೇವಣ್ಣ ಪರ ವಕೀಲರು, ವಾದ ಮಂಡನೆಗೆ ಕಾಲಾವಕಾಶ ನೀಡಬೇಕು ಎಂದು ಕೋರಿದ್ದರು. ಇದಕ್ಕೆ ಆಕ್ಷೇಪಿಸಿದ್ದ ಸರ್ಕಾರಿ ಅಭಿಯೋಜಕರು, ಪ್ರಕರಣದಲ್ಲಿ ದೋಷಾರೋಪ ಹೊರಿಸುವ ಪ್ರಕ್ರಿಯೆಗೆ ಈ ಹಿಂದೆ ನೀಡಲಾಗಿದ್ದ ತಡೆಯಾಜ್ಞೆಯನ್ನು ತೆರವುಗೊಳಿಸಿ ಹೈಕೋರ್ಟ್ 2026ರ ಫೆಬ್ರುವರಿ 5ರಂದು ಆದೇಶಿಸಿತ್ತು. ಆದ್ದರಿಂದ ಈಗಾಗಲೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ವಿಚಾರಣೆ ಆರಂಭಿಸಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು. ಅದಕ್ಕೆ ಪ್ರತಿಕ್ರಿಯಿಸಿದ್ದ ಪೀಠ, ದೋಷಾರೋಪ ನಿಗದಿ ಪ್ರಕ್ರಿಯೆ ನಡೆಸುವುದಕ್ಕೆ ನೀಡಲಾಗಿದ್ದ ತಡೆಯಾಜ್ಞೆ ತೆರವುಗೊಳಿಸಿ, ಕಾನೂನು ಪ್ರಕಾರ ವಿಚಾರಣೆ ಮುಂದುವರೆ ಯಬಹುದಾಗಿದೆ ಎಂದು ಸೂಚಿಸಿತ್ತು. ಈ ಹಿನ್ನೆಲೆಯಲ್ಲಿ ರೇವಣ್ಣ ಪರ ವಕೀಲರು ಅರ್ಜಿಯನ್ನು ಹಿಂಪಡೆದಿದ್ದಾರೆ.

ಪ್ರಕರಣದ ಹಿನ್ನೆಲೆ: ಪ್ರಜ್ವಲ್ ರೇವಣ್ಣ ಅವರಿಂದ ಅತ್ಯಾಚಾರಕ್ಕೆ ಒಳಗಾಗಿರುವ ಆರೋಪ ಮಾಡಿದ್ದ ಮನೆಕೆಲಸದ ಮಹಿಳೆಯನ್ನು ಹೆಚ್.ಡಿ. ರೇವಣ್ಣ, ಅವರ ಪತ್ನಿ ಭವಾನಿ ಸೇರಿದಂತೆ 9 ಮಂದಿ ಆರೋಪಿಗಳು ಅಪಹರಿಸಿದ್ದಾರೆ ಎಂದು ಸಂತ್ರಸ್ತೆಯ ಪುತ್ರ ನೀಡಿದ್ದ ದೂರಿನ ಅನ್ವಯ ಮೈಸೂರಿನ ಕೆ.ಆರ್. ಪೇಟೆ ಪೊಲೀಸ್ ಠಾಣೆಯಲ್ಲಿ 2025ರ ಮೇ 2ರಂದು ಎಫ್‌ಐಆರ್ ದಾಖಲಾಗಿತ್ತು. ಪೊಲೀಸರು ಪ್ರಕರಣ ಸಂಬಂಧ ತನಿಖೆ ನಡೆಸಿ ವಿಶೇಷ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. 2024ರ ಆಗಸ್ಟ್ 17ರಂದು ಕಾಗ್ನಿಜೆನ್ಸ್ ಸ್ವೀಕರಿಸಿದ್ದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಆರೋಪಿಗಳ ವಿರುದ್ಧ ದೋಷಾರೋಪ ನಿಗದಿ ಮಾಡಲು ನಿರ್ಧರಿಸಿತ್ತು. ಈ ಪ್ರಕ್ರಿಯೆ ಮುಂದೂಡುವಂತೆ ವಿಶೇಷ ನ್ಯಾಯಾಲಯಕ್ಕೆ ಹೈಕೋರ್ಟ್ ಸೂಚಿಸಿ, 2025ರ ಜನವರಿ 17ರಂದು ಮಧ್ಯಂತರ ಆದೇಶ ಮಾಡಿತ್ತು.

# ಭೀಕರ ಬಿರುಗಾಳಿ ಮಳೆಗೆ ತತ್ತರಿಸಿದ ಬೆಂಗಳೂರು 226 ಮರಗಳು, 623 ಕೊಂಬೆಗಳು ಧರಾಶಾಹಿ



**ಬೆಂಗಳೂರು,ಏ.30-**ಬುಧವಾರ ಸಂಜೆ ಸುರಿದ ಬಿರುಗಾಳಿ ಸಮೇತ ಆಲಿಕಲ್ಲು ಮಳೆಗೆ ರಾಜಧಾನಿ ತತ್ತರಿಸಿದೆ. ಸುಮಾರು ಒಂದೂವರೆ ಗಂಟೆಯ ಮಳೆಯಿಂದಾಗಿ 10 ಮಂದಿ ಸಾವನ್ನಪ್ಪಿದರೆ, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮೃತಪಟ್ಟ ಕುಟುಂಬಸ್ಥರ ರೋದನ ಹೇಳತೀರದಾಗಿದೆ.

ಜೋರು ಗಾಳಿ-ಮಳೆ ಪರಿಣಾಮ ನಿನ್ನೆಯಿಂದ ಇಂದು ಬೆಳಗ್ಗೆ 9.15ರೊಳಗೆ ಜಿಬಿಎ ವ್ಯಾಪ್ತಿಯಲ್ಲಿ 226 ಮರಗಳು ಧರಾಶಾಹಿಯಾಗಿವೆ. 623 ಮರದ ಕೊಂಬೆಗಳು ಉರುಳಿ ಬಿದ್ದಿವೆ. ಬೃಹದಾಕಾರದ ಮರ ಹಾಗೂ ಅದರ ಕೊಂಬೆಗಳು ಏಕಾಏಕಿ ಬಿದ್ದಿದ್ದರಿಂದ ಅವುಗಳ ಕೆಳಗೆ ನಿಲ್ಲಿಸಿದ್ದ ಹಾಗೂ ಚಲಿಸುತ್ತಿದ್ದ ವಾಹನಗಳು ಹಾನಿಗೊಳಗಾಗಿವೆ. ಮಳೆ ನೀರಿನ ರಭಸಕ್ಕೆ ರಸ್ತೆ ಇಕ್ಕೆಲ್ಲಗಳಲ್ಲಿ ನೀರು ತುಂಬಿಕೊಂಡು ಸಂಚಾರ ಅಸ್ತವ್ಯಸ್ತವಾಯಿತು. ಪಂಚ ಪಾಲಿಕೆಗಳ ಕಂಟ್ರೋಲ್ ರೂಮ್‌ಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರಿಂದ ಮರ ಹಾಗೂ ವಿದ್ಯುತ್ ಕಂಬಗಳು ಬಿದ್ದಿರುವ ಬಗ್ಗೆ ದೂರುಗಳು ಬಂದರೆ, 68 ಕರೆಗಳು ಜಲಾವೃತವಾಗಿರುವ ಸಂಬಂಧ ದೂರುಗಳು ಬಂದಿವೆ ಎಂದು ಜಿಬಿಎ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಯಾವ ಪಾಲಿಕೆಯಲ್ಲಿ ಎಷ್ಟೆಷ್ಟು ಮರಗಳು ಧರಾಶಾಹಿ: ಪಂಚ ಪಾಲಿಕೆಗಳ ಪೈಕಿ ಬೆಂಗಳೂರು ಪಶ್ಚಿಮ ವಿಭಾಗ ಪಾಲಿಕೆಯಲ್ಲಿ 101 ಮರಗಳು ಉರುಳಿಬಿದ್ದರೆ, 313 ಕಡೆಗಳಲ್ಲಿ ಮರದ ಕೊಂಬೆಗಳು ನೆಲಕ್ಕೆ ಮುಖಮಾಡಿವೆ. ಬೆಂಗಳೂರು ಕೇಂದ್ರ ಪಾಲಿಕೆಯಲ್ಲಿ 70 ಕಡೆ ಮರಗಳು ಬಿದ್ದರೆ, 131 ಕಡೆಗಳಲ್ಲಿ ಕೊಂಬೆಗಳು ಉರುಳಿವೆ. ಬೆಂಗಳೂರು ದಕ್ಷಿಣದಲ್ಲಿ 26 ಮರಗಳು ಹಾಗೂ 95 ಕಡೆಗಳಲ್ಲಿ ಕೊಂಬೆಗಳು ಉರುಳಿಬಿದ್ದಿವೆ. ಒಟ್ಟಾರೆ 226 ಕಡೆಗಳಲ್ಲಿ ಮರಗಳು ಬಿದ್ದ ಪೈಕಿ, 138 ಕಡೆಗಳಲ್ಲಿ ಅವುಗಳನ್ನು ತೆರವುಗೊಳಿಸಿದರೆ, 623 ಮರದ ಕೊಂಬೆ ಬಿದ್ದ ಪೈಕಿ 308 ಕಡೆಗಳಲ್ಲಿ ತೆರವು ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜೆ.ಪಿ.ನಗರ ಒಂದನೇ ಹಂತದಲ್ಲಿ ವಿದ್ಯುತ್ ಕಂಬ ಬಿದ್ದಿದ್ದರಿಂದ ನಿಂತಿದ್ದ ಕಾರಿಗೆ ಹಾನಿಯಾಗಿತ್ತು. ಇಂದು ಬೆಸ್ಕಾಂ ಅಧಿಕಾರಿಗಳು ಸ್ಥಳಕ್ಕಾಗಮಿಸಿ ವಿದ್ಯುತ್ ಕಂಬ ಬದಲಿಸುವ ಕಾರ್ಯದಲ್ಲಿ ನಿರತರಾದರು. ಈ ವೇಳೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಕಡಿತಗೊಳಿಸಲಾಗಿತ್ತು. ಜೆ.ಪಿ.ನಗರದ 24 ನೇ ಮುಖ್ಯರಸ್ತೆಯಲ್ಲಿ ನೆಕ್ಸಾನ್ ಕಾರಿನ ಮೇಲೆ ಬಿದ್ದ ಬೃಹದಾಕಾರದ ಮರ ಬಿದ್ದಿದ್ದರಿಂದ ಕಾರಿನ ಸ್ಟೇರಿಂಗ್ ಕಟ್ ಆಗಿ, ಗಾಜು ಪುಡಿ ಪುಡಿಯಾಗಿದೆ. ನಜ್ಜುಗುಜ್ಜಾಗಿದ ಕಾರಿನ ಮೇಲೆ ಬಿದ್ದ ಮರವನ್ನು ಜಿಬಿಎ ಸಿಬ್ಬಂದಿ ತೆರವುಗೊಳಿಸಿದರು.

ಮಳೆಯಿಂದ ಸಮಸ್ಯೆಯಾದರೆ 3 ಗಂಟೆಯೊಳಗೆ ದೂರು ಇತ್ಯರ್ಥ: ಜಿಬಿಎ ವ್ಯಾಪ್ತಿಯ ಕೇಂದ್ರ ನಗರ ಪಾಲಿಕೆಯ ಕೆಲ ಸ್ಥಳಗಳಲ್ಲಿ ಏಕಕಾಲದಲ್ಲಿ 77 ಮಿ.ಮೀ. ಮಳೆಯಾಗಿದ್ದು, ಅದರಿಂದಾದ ಸಮಸ್ಯೆ ಅಥವಾ ದೂರುಗಳನ್ನು 3 ಗಂಟೆಗಳೊಳಗಾಗಿ ಪರಿಹರಿಸಲು ನಗರ ಪಾಲಿಕೆಗಳ ಅಧಿಕಾರಿಗಳಿಗೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ ನೀಡಿದ್ದಾರೆ.

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಕಾಟನ್‌ಪೇಟೆ, ಬಿನ್ನಿಪೇಟೆ, ಸುಭಾಷ್‌ನಗರ, ಜಗಜೀವನರಾಮ್‌ನಗರ ಮತ್ತು ಕೆ.ಆರ್. ಮಾರುಕಟ್ಟೆ ಪ್ರದೇಶಗಳಲ್ಲಿ ಭಾರಿ ಮಳೆಯಾಗಿದ್ದು, ಇತರ ನಗರ ಪಾಲಿಕೆಗಳಲ್ಲಿ ಮಧ್ಯಮ ಪ್ರಮಾಣದ ಮಳೆ ಬಿದ್ದಿದೆ. ಹೆಚ್ಚು ಮಳೆಯಾದ ಪ್ರದೇಶಗಳಲ್ಲಿ ಹಾಗೂ ರಸ್ತೆಗಳಲ್ಲಿ ಜಲಾವೃತವಾಗಿರುವ ಶೋಲ್ಡರ್ ಡ್ರೇನ್, ಗ್ರೇಟಿಂಗ್‌ಗಳ ಬಳಿ ಇರುವ ತ್ಯಾಜ್ಯವನ್ನು ತೆರವುಗೊಳಿಸಿ, ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿ ಕೊಡಲಾಗುತ್ತಿದೆ.

ಅತಿಯಾದ ಮಳೆ ಸುರಿದ ಪ್ರದೇಶಗಳಲ್ಲಿ ಅಧಿಕಾರಿಗಳು ಖುದ್ದು ಮೇಲ್ವಿಚಾರಣೆ ನಡೆಸಿ, ಸಮಸ್ಯೆ ಬಗೆಹರಿಸುವ ಕಾರ್ಯ ಮಾಡುತ್ತಿದ್ದಾರೆ. ಜೊತೆಗೆ ಪ್ರಮುಖ ರಸ್ತೆಗಳಲ್ಲಿ ಧರೆಗುರುಳಿದ ಮರಗಳನ್ನು ತೆರವುಗೊಳಿಸಿ, ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಗುತ್ತಿದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಬುಧವಾರ ಸಂಜೆ ನಗರಾದ್ಯಂತ ಸರಾಸರಿ 60 ಮಿ.ಮೀ. ಮಳೆಯಾಗಿದೆ. ಬೆಂಗಳೂರು ನಗರ ಕೇಂದ್ರ ನಿಗಮ ವ್ಯಾಪ್ತಿಯ ಕಾಟನ್‌ಪೇಟೆ, ಬಿನ್ನಿಪೇಟೆ, ಕೆಂಪಾಪುರ ಹಾಗೂ ಸುಭಾಷ್ ನಗರ ಪ್ರದೇಶಗಳಲ್ಲಿ ಗರಿಷ್ಠ 77.6 ಮಿ.ಮೀ ಮಳೆಯಾಗಿದೆ. ಉತ್ತರ ನಗರ ನಿಗಮದ ಕೆಲವು ಭಾಗಗಳಲ್ಲಿ ಕನಿಷ್ಠ 8 ಮಿ.ಮೀ. ಮಳೆಯಾಗಿದೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಹೇಳಿದ್ದಾರೆ.

# ದಾವಣಗೆರೆ: ಕಾಂಗ್ರೆಸ್‌ನಿಂದ ಆರು ಮುಖಂಡರ ಉಚ್ಚಾಟನೆ, ಜಬ್ಬಾರ್‌ರನ್ನು ವಾಪಸ್ ಪಕ್ಷಕ್ಕೆ ಕರೆತಂದ್ರೆ ಪ್ರತಿಭಟನೆ ಎಚ್ಚರಿಕೆ



**ದಾವಣಗೆರೆ,ಏ.30-**ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಪಕ್ಷ ವಿರೋಧಿ ಕೆಲಸ ಮಾಡಿದ ಆರೋಪದ ಹಿನ್ನೆಲೆ ಕಾಂಗ್ರೆಸ್ ಪಕ್ಷದಿಂದ ಜಿಲ್ಲೆಯ ಆರು ಜನ ಮುಖಂಡರನ್ನು ಉಚ್ಚಾಟಿಸಲಾಗಿದೆ. ಇದೇ ಆರೋಪದ ಹಿನ್ನೆಲೆಯಲ್ಲಿ ಹಾಲಿ ವಿಧಾನ ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಅವರ ವಿರುದ್ಧ ಈಗಾಗಲೇ ಪಕ್ಷ ಶಿಸ್ತು ಕ್ರಮ ಕೈಗೊಂಡಿತ್ತು.

ಎಮ್‌ಎಲ್‌ಸಿ ಅಬ್ದುಲ್ ಜಬ್ಬಾರ್ ಪರ ನಿಂತಿದ್ದ ಎಂ.ಟಿ.ಸುಭಾಷ್ ಚಂದ್ರ, ಮಾಜಿ ವಕ್ಫ್ ಬೋರ್ಡ್ ಅಧ್ಯಕ್ಷ ಸಿರಾಜ್ ಅಹ್ಮದ್, ಕಾಂಗ್ರೆಸ್ ಮುಖಂಡ ಘನಿ ತಾಹೇರ್, ಕಡತಿ ತಿಪ್ಪೇಶ್, ಯು ಎಂ ಮನ್ಸೂರ್ ಅಲಿ, ಇನಾಯತ್ ವುಲ್ಲಾ ಖಾನ್ ಅವರನ್ನು ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ ಎಂದು ಪಕ್ಷದ ಜಿಲ್ಲಾಧ್ಯಕ್ಷ ಹೆಚ್ ಬಿ ಮಂಜಪ್ಪ ಅವರು ತಿಳಿಸಿದರು.

ಅಲ್ಲದೆ ಈಗಾಗಲೇ ಉಚ್ಚಾಟನೆ ಆಗಿರುವ ಅಬ್ದುಲ್ ಜಬ್ಬಾರ್ ಅವರನ್ನು ವಾಪಾಸ್ ಪಕ್ಷಕ್ಕೆ ಕರೆತರವುದು ಬೇಡ. ಎಐಸಿಸಿ ಕೆಪಿಸಿಸಿ ಆರು ವರ್ಷ ಪಕ್ಷದಿಂದ ಉಚ್ಚಾಟನೆ ಮಾಡಿದೆ. ಅದರೂ ಅವರನ್ನು ವಾಪಾಸ್ ಕರೆತರಲು ಪ್ರಯತ್ನ ನಡೆದಿದ್ದು, ಇದಕ್ಕೆ ನಮ್ಮ ವಿರೋಧ ಇದೆ ಎಂದು ಅಸಮಾಧಾನ ಹೊರಹಾಕಿದ್ರು.

ಜಬ್ಬಾರ್ ಅವರನ್ನು ವಾಪಸ್ ಪಕ್ಷಕ್ಕೆ ಕರೆತಂದ್ರೆ, ಪ್ರತಿಭಟನೆ: ಉಪಚುನಾವಣೆ ವೇಳೆ ಕೆಲವರು ಪಕ್ಷಕ್ಕೆ ಅವಮಾನ ಆಗುವಂತೆ ನಾಯಕರನ್ನು ನಿಂದಿಸಿದ್ದರು. ಈ ಹಿನ್ನೆಲೆಯಲ್ಲಿ ಒಟ್ಟು ಆರು ಜನರನ್ನು ಉಚ್ಚಾಟಿಸಲಾಗಿದೆ. ಇವರ ಪಕ್ಷ ವಿರೋಧಿ ಚಟುವಟಿಕೆ ಗಮನಕ್ಕೆ ಬಂದಿದೆ.ʼ ಪಕ್ಷಕ್ಕೆ ಡ್ಯಾಮೇಜ್ ಮಾಡಿದ್ದಾರೆ. ಕಾಂಗ್ರೆಸ್ ಅಲ್ಪಸಂಖ್ಯಾತ ವಿರೋಧಿ ಎಂದು ಬಿಂಬಿಸಿದ್ದರು. ಆದ್ದರಿಂದ ಇವರ ವಿರುದ್ಧ ಕೆಪಿಸಿಸಿಗೆ ಕಳುಹಿಸಿ ಶಿಸ್ತು ಕ್ರಮಕ್ಕೆ ಶಿಫಾರಸು ಮಾಡಿದ್ದೇವೆ. ಈಗಾಗಲೇ ಉಚ್ಚಾಟನೆ ಆಗಿರುವ ಅಬ್ದುಲ್ ಜಬ್ಬಾರ್ ಅವರನ್ನು ಮತ್ತೆ ಪಕ್ಷಕ್ಕೆ ಕರೆತರಕೂಡದು ಎಂದು ಮನವಿ ಮಾಡಿದ್ದೇವೆ. ಅಬ್ದುಲ್ ಜಬ್ಬಾರ್ ಅವರನ್ನು ಪಕ್ಷಕ್ಕೆ ಕರೆ ತಂದ್ರೆ, ಪ್ರತಿಭಟನೆ ಮಾಡುತ್ತೇವೆ ಎಂದು ಹೆಚ್ ಬಿ ಮಂಜಪ್ಪ ಎಚ್ಚರಿಸಿದ್ದಾರೆ.

**ಎಮ್‌ಎಲ್‌ಸಿ ಸ್ಥಾನದಿಂದ ಜಬ್ಬಾರ್ ಉಚ್ಚಾಟನೆ ಆಗ್ಬೇಕು:** ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಯೂಬ್ ಪೈಲ್ವಾನ್ ಮಾತನಾಡಿ, ಜಬ್ಬಾರ್ ಸಾಹೇಬ್ರು ಉಚ್ಚಾಟನೆ ಸಂಬಂಧ ಪತ್ರಿಕಾಗೋಷ್ಠಿ ಕರೆದಿದ್ದೇವೆ. ಆರು ಜನ ಪಕ್ಷ ವಿರೋಧಿ ಕೆಲಸ ಮಾಡಿರುವ ವಿಡಿಯೋವನ್ನು ಪ್ರದರ್ಶನ ಮಾಡಿದ್ದೇವೆ. ಈ ಮೂಲಕ ಪಕ್ಷ ವಿರೋಧಿ ಕೆಲಸ ಮಾಡಿದ್ದನ್ನು ಜನರ ಗಮನಕ್ಕೆ ತಂದಿದ್ದೇವೆ. ಅಬ್ದುಲ್ ಜಬ್ಬಾರ್ರ ಉಚ್ಚಾಟನೆ ಸ್ವಾಗತ ಮಾಡಿದ್ದೇನೆ. ಅವರನ್ನು ವಾಪಾಸ್ ಪಕ್ಷಕ್ಕೆ ಕರೆತಂದ್ರೇ ನಾವೇ ಕೆಪಿಸಿಸಿ ಮುಂದೆ ಪ್ರತಿಭಟನೆ ಮಾಡುತ್ತೇವೆ. ಅವರನ್ನು ಎಮ್ ಎಲ್ಸಿ ಸ್ಥಾನದಿಂದ ಉಚ್ಚಾಟನೆ ಮಾಡ್ಬೇಕು ಎಂದು ಆಗ್ರಹಿಸಿದರು. ಮಾಜಿ ಮೇಯರ್ ಚಮನ್ ಸಾಬ್ ಮಾತನಾಡಿ ,ಕಾಂಗ್ರೆಸ್ ಪಕ್ಷದ ವಿರುದ್ಧ ಮಾತನಾಡುವವರು ಯೋಚನೆ ಮಾಡಬೇಕಿದೆ. ಮುಂದಿನ ದಿನಗಳಲ್ಲಿ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಪಂ ಚುನಾವಣೆಗಳು ಬರಲಿದೆ.

ಅ ಚುನಾವಣೆಯಲ್ಲಿ ಸ್ಪರ್ಧೆ ಮಾಡುವ ಮುಸ್ಲಿಂ ಅಭ್ಯರ್ಥಿಗಳಿಗೆ ಅನ್ಯಾಯ ಆಗಲಿದೆ. ರಾಜಕೀಯದಲ್ಲಿ ಧರ್ಮ ಸಮಾಜ ಬೆರೆಸುತ್ತಿದ್ದಾರೆ.

ಇದರಿಂದ ಸ್ಥಳೀಯ ಚುನಾವಣೆಗಳಲ್ಲಿ ಸ್ಪರ್ಧೆ ಮಾಡುವ ಮುಸ್ಲಿಂ ಅಭ್ಯರ್ಥಿಗಳ ಮೇಲೆ ಪರಿಣಾಮ ಉಂಟಾಗಲಿದೆ. ಕೆಲವರ ಷಡ್ಯಂತ್ರಕ್ಕೆ ಮುಸ್ಲಿಂರು ಬಲಿಯಾಗಬೇಡಿ. ಮುಸ್ಲಿಂರು ಕಾಂಗ್ರೆಸ್ ಪಕ್ಷದ ಉಸಿರು, ಪಕ್ಷ ಅವರನ್ನು ಕೈ ಬಿಡುವುದಿಲ್ಲ ಎಂದು ತಿಳಿಸಿದರು.

# ಧಾರವಾಡ: ಅಪ್ರಾಪ್ತ ಮಗನ ಕೈಗೆ ಬೈಕ್ ಕೊಟ್ಟ ತಪ್ಪಿಗೆ ಭಾರೀ ದಂಡ ತೆತ್ತ ತಂದೆ



■ ಕನ್ನಡ ಮಾತೃ ಭೂಮಿ ವಾರ್ತೆ

**ಧಾರವಾಡ,ಏ.30-**ತಮ್ಮ ಅಪ್ರಾಪ್ತ ಮಗನ ಕೈಗೆ ಬೈಕ್ ಕೊಟ್ಟ ತಪ್ಪಿಗೆ ಪಾಲಕರೊಬ್ಬರು ಭಾರಿ ಪ್ರಮಾಣದ ದಂಡ ಭರಿಸಿದ ಘಟನೆ ಧಾರವಾಡದಲ್ಲಿ ನಡೆದಿದೆ. ಧಾರವಾಡದ ಮೈನುದ್ದೀನ್ ಜಲಾಲದಾರ ಎಂಬುವರೇ ಬಾರಿ ದಂಡ ಭರಿಸಿದ ಪಾಲಕರು. ಅವರ ಅಪ್ರಾಪ್ತ ಮಗ ಬೈಕ್ ಚಲಾಯಿಸುವಾಗ ಪೊಲೀಸರಿಗೆ ಸಿಕ್ಕು ಬಿದ್ದಿದ್ದನು. ನಂತರ ಪೊಲೀಸರು ಸಂಚಾರಿ ನಿಯಮಾನುಸಾರ ದಂಡ ವಿಧಿಸಿದ್ದರು.

ಧಾರವಾಡದ ಹಿರಿಯ ದಿವಾಣಿ ನ್ಯಾಯಾಲಯದಲ್ಲಿ ಪಾಲಕರು 26 ಸಾವಿರ ರೂಪಾಯಿ ದಂಡ ಭರ್ತಿ ಮಾಡಿದ್ದಾರೆ. ಬಳಿಕ ಪೊಲೀಸರು ಬೈಕ್ ಮಾಲೀಕರಿಗೆ ಸಂಚಾರಿ ನಿಯಮಗಳ ಮಾಹಿತಿ ನೀಡಿ ಕಳಿಸಿದ್ದಾರೆ. ಸಂಚಾರಿ ಠಾಣೆಯ ಸಿಪಿಐ ಶ್ರೀನಿವಾಸ ಮೇಟಿ ಅವರ ಮಾರ್ಗದರ್ಶನದಲ್ಲಿ ಪಿಎಸ್ಐ ವಿ.ಐ.ಬಳ್ಳಾರಿ ಅವರು ಕ್ರಮ ಕೈಕೊಂಡಿದ್ದರು.

# ಹುಬ್ಬಳ್ಳಿ-ಧಾರವಾಡದ 17 ವಸತಿ ನಿಲಯಗಳ ಮೇಲೆ ಲೋಕಾಯುಕ್ತ ದಾಳಿ


■ ಕನ್ನಡ ಮಾತೃ ಭೂಮಿ ವಾರ್ತೆ

**ಹುಬ್ಬಳ್ಳಿ,ಏ.30-**ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳು ಸಮರ್ಪಕವಾಗಿ ದೊರೆಯುತ್ತಿಲ್ಲ ಎಂಬ ದೂರುಗಳ ಹಿನ್ನೆಲೆ ಹುಬ್ಬಳ್ಳಿ-ಧಾರವಾಡ ಅವಳಿನಗರದ 17 ವಸತಿ ನಿಲಯಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ಬುಧವಾರ ಬೆಳ್ಳಂಬೆಳಿಗ್ಗೆ ದಾಳಿ ನಡೆಸಿದರು.

ಲೋಕಾಯುಕ್ತ ಎಸ್ಪಿ ಸಿದ್ದಲಿಂಗಪ್ಪ ಅವರ ನೇತೃತ್ವದಲ್ಲಿ ಈ ದಾಳಿ ನಡೆದಿದ್ದು, ಹುಬ್ಬಳ್ಳಿಯ ಲಿಂಗರಾಜನಗರದ ತೋಳನಕೇರಿಯಲ್ಲಿರುವ ವಸತಿ ನಿಲಯವನ್ನೂ ಅಧಿಕಾರಿಗಳು ಪರಿಶೀಲಿಸಿದರು. ಡಿವೈಎಸ್‌ಪಿ ವಿಜಯ ಬಿರಾದ್ರ ನೇತೃತ್ವದ ತಂಡ ವಿದ್ಯಾರ್ಥಿಗಳಿಂದ ಮಾಹಿತಿ ಸಂಗ್ರಹಿಸಿತು.

ವಿದ್ಯಾರ್ಥಿಗಳು ಟಿಸರಿಯಾದ ಊಟ ನೀಡುವುದಿಲ್ಲ, ವಸತಿ ಸೌಲಭ್ಯಗಳು ಸಮರ್ಪಕವಾಗಿಲ್ಲಟಿ ಎಂದು ಅಧಿಕಾರಿಗಳ ಮುಂದೆ ಅಳಲು ತೋಡಿಕೊಂಡರು. ಈ ಕುರಿತು ಸಂಪೂರ್ಣ ವರದಿಯನ್ನು ಲೋಕಾಯುಕ್ತ ಎಸ್ಪಿಗೆ ಸಲ್ಲಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಒಟ್ಟು 17 ತಂಡಗಳು ದಾಳಿ ನಡೆಸಿದ್ದು, ಅವುಗಳಲ್ಲಿ 7 ಬಿಸಿಎಂ ವಸತಿ ನಿಲಯಗಳು, 7 ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳು ಹಾಗೂ 3 ಅಲ್ಪಸಂಖ್ಯಾತರ ವಸತಿ ನಿಲಯಗಳು ಸೇರಿವೆ.



ದಾವಣಗೆರೆ, ಹಾವೇರಿ, ಗದಗ, ಬೆಳಗಾವಿ ಹಾಗೂ ಧಾರವಾಡ ಜಿಲ್ಲೆಗಳ ಅಧಿಕಾರಿಗಳು ದಾಳಿಯಲ್ಲಿ ಭಾಗವಹಿಸಿದ್ದರು. ಹಾಸ್ಟೆಲ್‌ಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡ ಲೋಕಾಯುಕ್ತ ಇಲಾಖೆ, ಉನ್ನತ ಅಧಿಕಾರಿಗಳ ಸೂಚನೆಯಂತೆ ಪರಿಶೀಲನೆ ನಡೆಸಿದೆ.ಜೂನ್ ತಿಂಗಳಲ್ಲಿ ಸಮಗ್ರ ವರದಿ ಸಲ್ಲಿಸುವಂತೆ ಸೂಚನೆ ನೀಡಲಾಗಿದ್ದು, ಪ್ರಾಥಮಿಕ ವರದಿಯನ್ನು ಇಂದೇ ಎಸ್ಪಿಗೆ ಸಲ್ಲಿಸಲಾಗುತ್ತದೆ ಎಂದು ತಿಳಿದುಬಂದಿದೆ.

# ಗಡಿಪಾರು ಪ್ರಶ್ನಿಸಿದ್ದ ಮಹೇಶ್ ಶೆಟ್ಟಿ ತಿಮರೋಡಿ ಅರ್ಜಿ ವಜಾಗೊಳಿಸಿದ ಹೈಕೋರ್ಟ್; ಸರ್ಕಾರದ ಮುಂದೆ ಮೇಲ್ಮನವಿ ಸಲ್ಲಿಸಲು ಸೂಚನೆ

**ಬೆಂಗಳೂರು,ಏ.30-**ಬೆಳ್ತಂಗಡಿ ವಿದ್ಯಾರ್ಥಿನಿ ಸಾವಿನ ಕುರಿತು ಹೋರಾಟ ನಡೆಸುತ್ತಿರುವ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ಅವರನ್ನು ದಕ್ಷಿಣ ಕನ್ನಡ ಜಿಲ್ಲೆಯಿಂದ ರಾಯಚೂರಿನ ಮಾನ್ವಿ ತಾಲೂಕಿಗೆ ಮೂರನೇ ಬಾರಿಗೆ ಗಡಿಪಾರು ಮಾಡಿ ಹೊರಡಿಸಿದ್ದ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿ ಆದೇಶಿಸಿದೆ.

ತಮ್ಮನ್ನು ಮಾನ್ವಿಗೆ ಗಡಿಪಾರು ಮಾಡಿದ್ದ ಪುತ್ತೂರು ಉಪವಿಭಾಗಾಧಿಕಾರಿಯ ಕ್ರಮವನ್ನು ಪ್ರಶ್ನಿಸಿ ಮಹೇಶ್ ಶೆಟ್ಟಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿ, ತೀರ್ಪು ಕಾಯ್ದಿರಿಸಿದ್ದ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದಂ ಅವರಿದ್ದ ನ್ಯಾಯಪೀಠ, ಇಂದು ತೀರ್ಪು ಪ್ರಕಟಿಸಿತು.

ಅಲ್ಲದೆ, ಉಪವಿಭಾಗಾಧಿಕಾರಿಗಳ ಆದೇಶವನ್ನು ಪ್ರಶ್ನಿಸಿ ಸರ್ಕಾರದ ಗೃಹ ಕಾರ್ಯದರ್ಶಿಗೆ ಮೇಲ್ಮನವಿ ಅರ್ಜಿ ಸಲ್ಲಿಸಬಹುದಾಗಿದೆ. ಆದ್ದರಿಂದ ಅರ್ಜಿ ವಿಚಾರಣೆಗೆ ಊರ್ಜಿತವಲ್ಲ ಎಂದು ತಿಳಿಸಿದ ನ್ಯಾಯಪೀಠ, ಅರ್ಜಿದಾರರು ಸರ್ಕಾರದ ಮುಂದೆ ಮೇಲ್ಮನವಿ ಅರ್ಜಿ ಸಲ್ಲಿಸುವ ಸಲುವಾಗಿ ಮುಂದಿನ ಎರಡು ವಾರಗಳ ಕಾಲ ಕ್ರಮಕ್ಕೆ ಮುಂದಾಗದಂತೆ ನ್ಯಾಯಪೀಠ ಮೌಖಿಕವಾಗಿ ಆದೇಶಿಸಿದೆ. ಆದೇಶದ ವಿಸ್ತೃತ ಪ್ರತಿ ಇನ್ನಷ್ಟೇ ಲಭ್ಯವಾಗಬೇಕಿದೆ.

ವಾದ, ಪ್ರತಿವಾದ: ಅರ್ಜಿಗೆ ಸಂಬಂಧಿಸಿದಂತೆ ಈ ಹಿಂದೆ ನಡೆದಿದ್ದ ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಅರ್ಜಿದಾರರು ಬೆಳ್ತಂಗಡಿ ವಿದ್ಯಾರ್ಥಿನಿ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ನ್ಯಾಯ ದೊರಕಿಸುವುದಕ್ಕೆ ಸಂಬಂಧಿಸಿದಂತೆ ರ್ಯಾಲಿಗಳನ್ನು ನಡೆಸಿದ್ದಾರೆ. ಅಲ್ಲದೆ, ಹೋರಾಟಕ್ಕೆ ಮುಂದೆ ನಿಂತು ಬೆಂಬಲಿಸಿದ್ದಾರೆ. ಇದೇ ಕಾರಣದಿಂದ ಅವರ ವಿರುದ್ಧ ಹಲವು ಮಂದಿ ಕ್ಷುಲ್ಲಕ ಆರೋಪದಲ್ಲಿ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣಗಳನ್ನು ದಾಖಲಿಸಿದ್ದಾರೆ ಎಂದು ತಿಳಿಸಿದ್ದರು.

ಅಲ್ಲದೆ, ಈ ಹಿಂದೆ ಹೊರಡಿಸಿದ್ದ ಗಡಿಪಾರು ಆದೇಶವನ್ನು ಹೈಕೋರ್ಟ್ ರದ್ದುಪಡಿಸಿದ್ದು, ಹೊಸದಾಗಿ ಆದೇಶಿಸುವುದಕ್ಕೆ ನಿರ್ದೇಶನ ನೀಡಲಾಗಿತ್ತು. ಆದರೆ, ಪುತ್ತೂರು ಉಪವಿಭಾಗಾಧಿಕಾರಿಗಳು ಮತ್ತೊಂದು ಗಡಿಪಾರು ಆದೇಶ ಮಾಡಿದ್ದು, ಈ ಆದೇಶವು ಕರ್ನಾಟಕ ಪೊಲೀಸ್ ಕಾಯ್ದೆಯ ವಿವಿಧ ಸೆಕ್ಷನ್‌ಗಳನ್ನು ಉಲ್ಲಂಘಿಸಿದೆ. ಅರ್ಜಿದಾರರ ವಿರುದ್ಧದ ಆರೋಪಗಳು ಮತ್ತು ಗಡಿಪಾರು ಮಾಡಿರುವ ಆದೇಶಕ್ಕೆ ಯಾವುದೇ ಸಂಬಂಧವಿಲ್ಲ. ಅರ್ಜಿದಾರರ ವಿರುದ್ಧ ಒಟ್ಟು 26 ಪ್ರಕರಣಗಳು ದಾಖಲಾಗಿದ್ದು, 16 ಪ್ರಕರಣಗಳಲ್ಲಿ ಖುಲಾಸೆಗೊಳಿಸಲಾಗಿದೆ. 2 ಪ್ರಕರಣಗಳು ವಿಚಾರಣಾ ಹಂತದಲ್ಲಿದ್ದು, ಇನ್ನೂ 8 ಪ್ರಕರಣಗಳು ತನಿಖಾ ಹಂತದಲ್ಲಿವೆ. ಆದರೆ, ಗಡಿಪಾರು ಆದೇಶ ಹೊರಡಿಸಲು ಇತ್ತೀಚೆಗೆ ದಾಖಲಾಗಿರುವ 5 ಪ್ರಕರಣಗಳನ್ನು ಪರಿಗಣಿಸಿರುವುದಾಗಿ ತಿಳಿಸಿದ್ದು, ಅವೆಲ್ಲವೂ ಕ್ಷುಲ್ಲಕ ಪ್ರಕರಣಗಳಾಗಿವೆ ಎಂದು ವಾದಿಸಿದ್ದರು.

ಈ ಎಲ್ಲ ಪ್ರಕರಣಗಳು ಅರ್ಜಿದಾರರು ತಮ್ಮ ಊರಿನಲ್ಲಿಯೇ ನೆಲೆಸುವುದರಿಂದ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಗೆ ಧಕ್ಕೆ ಉಂಟಾಗಲಿದೆ ಎಂಬುದನ್ನು ಸಾಬೀತುಪಡಿಸುವುದಕ್ಕೆ ಪುರಾವೆಗಳಿಲ್ಲ. ಅಲ್ಲದೇ, ಅರ್ಜಿದಾರರ ಚಟುವಟಿಕೆಗಳು ಯಾವುದೇ ವ್ಯಕ್ತಿಯಿಂದ ಸಾರ್ವಜನಿಕ ಆಸ್ತಿಗಳಿಗೆ ಅಪಾಯ ಉಂಟಾಗಲಿದೆ

ಎಂದು ಸೂಚಿಸುವ ಸಂಬಂಧ ಯಾವುದೇ ವರದಿಯೂ ಇಲ್ಲ. ಹೀಗಾಗಿ ಅರ್ಜಿದಾರರನ್ನು ಗಡಿಪಾರು ಮಾಡುವ ಸಂಬಂಧ ಆದೇಶ ಹೊರಡಿಸುವುದಕ್ಕೆ ಸೂಕ್ತ ಕಾರಣಗಳನ್ನು ನೀಡುವುದಕ್ಕೆ ಉಪವಿಭಾಗಾಧಿಕಾರಿಗಳು ವಿಫಲರಾಗಿದ್ದು, ದುರುದ್ದೇಶಪೂರ್ವಕವಾದ ಆದೇಶ ಮಾಡಿದ್ದಾರೆ. ಆದ್ದರಿಂದ ಈ ಆದೇಶ ರದ್ದುಪಡಿಸಬೇಕು ಎಂದು ಮನವಿ ಮಾಡಿದ್ದರು.

ಇದಕ್ಕೆ ಆಕ್ಷೇಪಿಸಿದ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಅರ್ಜಿದಾರ ಮಹೇಶ್ ಶೆಟ್ಟಿ ಹಲವು ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆಗೆ ಸಮಸ್ಯೆ ಸೃಷ್ಟಿಸುತ್ತಿದ್ದಾರೆ.

ಎಪ್ರಿಲ್ 13 ಮತ್ತು 15ರಂದು ಅರ್ಜಿದಾರರ ವಿರುದ್ಧ ಮತ್ತೆ ಎರಡು ಪ್ರಕರಣಗಳು ದಾಖಲಾಗಿವೆ. ಅರ್ಜಿದಾರರು ಸೃಷ್ಟಿಸುವ ಸಮಸ್ಯೆ ನಿಭಾಯಿಸುವುದೇ ಬೆಳ್ತಂಗಡಿ ಪೊಲೀಸರ ಕೆಲಸವಾಗಿದೆ. ಈಗಾಗಲೇ ಅರ್ಜಿದಾರರ ವಿರುದ್ಧ 23 ಪ್ರಕರಣಗಳು ದಾಖಲಾಗಿವೆ. ಆದ್ದರಿಂದ ಅವರನ್ನು ಗಡಿಪಾರು ಮಾಡಿರುವ ಸರ್ಕಾರದ ಕ್ರಮದಲ್ಲಿ ಯಾವುದೇ ಕಾನೂನು ಉಲ್ಲಂಘನೆ ಆಗಿಲ್ಲ. ಆದ್ದರಿಂದ ಅರ್ಜಿಯನ್ನು ವಜಾಗೊಳಿಸಬೇಕು ಎಂದು ಕೋರಿದ್ದರು.

ಪ್ರಕರಣದ ಹಿನ್ನೆಲೆ: ಮಹೇಶ್ ಶೆಟ್ಟಿ ತಿಮರೋಡಿ ವಿರುದ್ಧ ವಿವಿಧ ಠಾಣೆಗಳಲ್ಲಿ 32ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ. ಆದ್ದರಿಂದ ಅವರಿಂದ ಶಾಂತಿಭಂಗಕ್ಕೆ ಕಾರಣವಾಗುತ್ತಿದೆ. ಜಾತಿ, ಜಾತಿಗಳ ನಡುವೆ ಗೊಂದಲ ಸೃಷ್ಟಿಸಿದ್ದು, ಸಮಾಜದಲ್ಲಿ ಅಶಾಂತಿಯನ್ನುಂಟು ಮಾಡಿದ್ದಾರೆ.

ಆದ ಕಾರಣ ಅವರನ್ನು ದಕ್ಷಿಣ ಕನ್ನಡ ಜಿಲ್ಲೆಯಿಂದ ಗಡಿಪಾರು ಮಾಡಬೇಕು ಎಂಬುದಾಗಿ ಬಂಟ್ವಾಳ ಉಪವಿಭಾಗದ ಪೊಲೀಸರು ಮನವಿ ಸಲ್ಲಿಸಿದ್ದರು. ಈ ಮನವಿ ಪರಿಗಣಿಸಿದ್ದ ಪುತ್ತೂರಿನ ಉಪ ವಿಭಾಗಾಧಿಕಾರಿಯವರು ಮಹೇಶ್ ಶೆಟ್ಟಿ ತಿಮರೋಡಿ

ಅವರನ್ನು ದಕ್ಷಿಣ ಕನ್ನಡ ಜಿಲ್ಲೆಯಿಂದ ರಾಯಚೂರು ಜಿಲ್ಲೆಯ ಮಾನ್ವಿಗೆ ಗಡಿಪಾರು ಮಾಡಿ ಆದೇಶಿಸಿದ್ದರು. ಈ ಆದೇಶ ರದ್ದು ಮಾಡಬೇಕು ಎಂದು ಕೋರಿ ಮಹೇಶ್ ಶೆಟ್ಟಿ ತಿಮರೋಡಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

## ಮಹಿಳೆಯರಿಗೆ ಉಚಿತ ಚಾಲನಾ ತರಬೇತಿ ಆರಂಭ

# ಮಹಿಳಾ ಸಬಲೀಕರಣಕ್ಕೆ ಶ್ರೀರಾಮ್ ಫೈನಾನ್ಸ್, ಡಿ ಬಿ ಸ್ಕಿಲ್ ಮತ್ತು ಅನುಭವ ಮಂಟಪದ ಹೆಜ್ಜೆ



■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,**ಮಹಿಳೆಯರ ಸಬಲೀಕರಣದ ದಿಸೆಯಲ್ಲಿ ನಗರದ ವಾಸವಿ ಶಾಲೆಯ ಸಭಾಂಗಣದಲ್ಲಿ ಶ್ರೀರಾಂ ಫೈನಾನ್ಸ್ ಹಾಗೂ ಡಿಬಿ ಸ್ಕಿಲ್ ವತಿಯಿಂದ ಅನುಭವ ಮಂಟಪ ಸಂಸ್ಥೆಯ ನೇತೃತ್ವದಲ್ಲಿ ಉಚಿತ ಚಾಲನಾ ತರಬೇತಿ ಕಾರ್ಯಕ್ರಮವನ್ನು ಗುರುವಾರ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅಲ್ಲಂಭವನದ ಎಂ.ಡಿ.ಅಲ್ಲಂ ರಚನಾ ಅವರು, ಮಹಿಳೆಯರು ಸ್ವಾವಲಂಬಿಯಾಗಿ ಬದುಕಲು ಕೌಶಲ್ಯಾಭಿವೃದ್ಧಿ ಅತ್ಯಗತ್ಯವಾಗಿದೆ. ಇಂದಿನ ದಿನಗಳಲ್ಲಿ ವಾಹನ ಚಾಲನೆ ತಿಳಿದಿರುವುದು ಮಹಿಳೆಯರ ಆತ್ಮವಿಶ್ವಾಸವನ್ನು ಹೆಚ್ಚಿಸುವುದಲ್ಲದೆ, ಉದ್ಯೋಗಾವಕಾಶಗಳಿಗೂ ದಾರಿ ಮಾಡಿಕೊಡುತ್ತದೆ ಎಂದು ಹೇಳಿದರು.

ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಹಂಪಿ ರಮಣ ಮಾತನಾಡಿ, ಮಹಿಳೆಯರು ಧೈರ್ಯದಿಂದ ಮುಂದೆ ಬಂದು ಕೌಶಲ್ಯಗಳನ್ನು ಕಲಿತು ಜೀವನದಲ್ಲಿ ಮುಂದುವರಿಯಬೇಕು ಎಂದು ಕರೆ ನೀಡಿದರು. ಚಾಲನಾ ತರಬೇತಿ ಪಡೆದರೆ ರಾಪಿಡೋ, ಉಬರ್, ಓಲಾ ಮುಂತಾದ ಸೇವೆಗಳ ಮೂಲಕ ಉದ್ಯೋಗಾವಕಾಶಗಳನ್ನು ಪಡೆಯಬಹುದು ಎಂದರು.

ನಂತರ ಭಾರತಿ ಮತ್ತು ಹಟ್ಟಿ ಗೀತಾ ಅವರು ಮಾತನಾಡಿ, ಕಾರು ಚಾಲನೆಯನ್ನು ಕೇವಲ ಆಸಕ್ತಿ ಅಥವಾ ಫ್ಯಾಷನ್ ಆಗಿ ನೋಡದೆ, ಜೀವನೋಪಾಯದ ಮಾರ್ಗವನ್ನಾಗಿ ರೂಪಿಸಿಕೊಳ್ಳಬೇಕು. ಇದನ್ನು 9ನೇ ತರಗತಿ ಮತ್ತು 10ನೇ ತರಗತಿ ಪಾಸ್ ಅಥವಾ ಫೇಲಾದಂತಹ ಮಹಿಳೆಯರು ಈ ತರಬೇತಿಯನ್ನು ಉಚಿತವಾಗಿ ಪಡೆಯಬಹುದು ಎಂದು ತಿಳಿಸಿದರು. ಇಂತಹ ತರಬೇತಿಗಳು ಮಹಿಳೆಯರ ಆರ್ಥಿಕ ಸ್ವಾವಲಂಬನೆ ಮತ್ತು ಜೀವನದಾರಕ್ಕೆ ಸಹಕಾರಿ ಆಗುತ್ತದೆ ಎಂದರು.

ಕೊನೆಯಲ್ಲಿ ಶಾಲೆಯ ಪ್ರಾಂಶುಪಾಲ ವೀರೇಶ್ ಅವರು ಮಾತನಾಡಿ, ಶಿಕ್ಷಣದ ಜೊತೆಗೆ ಜೀವನ ಕೌಶಲ್ಯಗಳನ್ನು ಕಲಿಯುವುದು ಅಗತ್ಯವಾಗಿದ್ದು, ಮಹಿಳೆಯರು ಈ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಡಿಬಿ ಸ್ಕಿಲ್‌ನ ಹಟ್ಟಿ ಗೀತಾ, ಅನುಭವ ಮಂಟಪ ಸಂಸ್ಥೆಯ ಹೋಮ್ ಪ್ರಿಯಾ, ಲೋಹಿತ್ ಕುಮಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಶಸ್ತ್ರಪಡೆಗಳಿಗೆ ಸಾವಯುವ ಆಹಾರ ಪೂರೈಕೆಗೆ ಕೇಂದ್ರ ಒತ್ತು



**ನವದೆಹಲಿ,**ದೇಶದ ಸಶಸ್ತ್ರ ಪಡೆಗಳಿಗೆ ಸಾವಯವ ಪೂರಿತ ಆಹಾರ ಪೂರೈಕೆಗೆ ಕೇಂದ್ರ ಸರ್ಕಾರ ಒತ್ತು ನೀಡಿದ್ದು, ಭಾರತ್ ಬ್ರ್ಯಾಂಡ್ ಪೌಷ್ಟಿಕ ಆಹಾರ, ಬಾಸ್ಮತಿ ಅಕ್ಕಿ ಪೂರೈಕೆಗೆ ಕೇಂದ್ರ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ.

ದೆಹಲಿಯ ಕೃಷಿ ಭವನದಲ್ಲಿ ಗುರುವಾರ, ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಈ ಸಂಬಂಧ ಭಾರತೀಯ ಸೇನೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪೌಷ್ಟಿಕ ಆಹಾರ ಪೂರೈಕೆ ಬಗ್ಗೆ ಚರ್ಚಿಸಿದರು.

ಸಶಸ್ತ್ರ ಪಡೆಗಳಿಗೆ ಗುಣಮಟ್ಟದ ಮತ್ತು ಸಾವಯವ ಪಡಿತರ ಆಹಾರ ಧಾನ್ಯ ಪೂರೈಸುವ ಬಗ್ಗೆ ಗಮನ ಹರಿಸಿದ ಸಚಿವರು, ಭಾರತ್ ಬ್ರ್ಯಾಂಡ್ ಅಕ್ಕಿ ಮತ್ತು ಗೋಧಿ ಉತ್ಪನ್ನ ಸರಬರಾಜು ವಿಸ್ತರಣೆಗೆ ಮಹತ್ವದ ಚರ್ಚೆ ನಡೆಸಿದರು.

ಅಕ್ಕಿ ಮತ್ತು ಗೋಧಿಯಂತಹ ಭಾರತ್ ಬ್ರಾಂಡ್ ಉತ್ಪನ್ನಗಳ ವಿಸ್ತರಣೆ ಜತೆಗೆ ಉತ್ತಮ ಗುಣಮಟ್ಟದ ಬಾಸ್ಮತಿ ಅಕ್ಕಿ ಸಂಗ್ರಹಣೆ

ಸೇರಿದಂತೆ ಸಶಸ್ತ್ರ ಪಡೆಗಳಿಗೆ ಅಗತ್ಯ ವಸ್ತುಗಳ ಖರೀದಿ ಕುರಿತು ಸಚಿವ ಜೋಶಿ ಅವರು ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಿದರು.

ಸಶಸ್ತ್ರ ಪಡೆಗಳಿಗೆ ಪರಿಣಾಮಕಾರಿಯಾಗಿ ಪೌಷ್ಟಿಕ ಆಹಾರ ಪೂರೈಕೆ ಮತ್ತು ಸಹಕಾರಿ ಸಂಸ್ಥೆಗಳ ಮೂಲಕ ಸ್ಕೇಲಿಂಗ್ ಸಂಗ್ರಹಣೆ ಕುರಿತು ಸಚಿವರು ಮತ್ತು ಅಧಿಕಾರಿಗಳು ಸಮಾಲೋಚನೆ ನಡೆಸಿದರು.

ಇದೇ ವೇಳೆ ಸಚಿವ ಜೋಶಿ ಅವರು, ರೈತರನ್ನು ಪ್ರೋತ್ಸಾಹಿಸುವಲ್ಲಿ ಮತ್ತು ಬೆಂಬಲಿಸುವಾಗ ಮತ್ತು ಸಶಸ್ತ್ರ ಪಡೆಗಳಿಗೆ ಉತ್ತಮ ಗುಣಮಟ್ಟದ, ಪೌಷ್ಟಿಕ ಆಹಾರ ಪೂರೈಕೆಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

# ...ಮೊದಲನೇ ಪುಟದಿಂದ

## ನಗರದಲ್ಲಿ ರಿಂಗ್ ರೋಡ್ ನಿರ್ಮಾಣ ಮಾಡಲು ಆಗ್ರಹಿಸಿ ಮನವಿ

ಘಟನೆ ಈ ರಸ್ತೆಯ ದುಸ್ಥಿತಿಯನ್ನು ಮತ್ತೊಮ್ಮೆ ಹೊರಹಾಕಿದೆ. ಈ ಹಿನ್ನೆಲೆಯಲ್ಲಿ ನಗರ ಹೊರವಲಯದಲ್ಲಿ ನಾಲ್ಕು ದಿಕ್ಕುಗಳನ್ನು ಸಂಪರ್ಕಿಸುವ ಸುಸಜ್ಜಿತ ರಿಂಗ್ ರೋಡ್ ನಿರ್ಮಾಣವೇ ಶಾಶ್ವತ ಪರಿಹಾರವಾಗಿದ್ದು, ಆದ್ದರಿಂದ ಸಂಬಂಧಿತ ಇಲಾಖೆ ತಕ್ಷಣ ಕ್ರಮ ಕೈಗೊಂಡು ರಿಂಗ್ ರೋಡ್ ನಿರ್ಮಾಣ ಮಾಡಿ, ನಗರದ ಬಹುಕಾಲದ ಕನಸನ್ನು ನನಸು ಮಾಡಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಶ್ರೀನಿವಾಸ ಸೋಮಿಶೆಟ್ಟಿ, ಬಸವರಾಜ, ಕಲೀಂ ಅಹ್ಮದ್, ಎಂ.ಎ.ಖಾಜಾ, ಮಲ್ಲಿಕಾರ್ಜುನ ಸ್ವಾಮಿ, ಬಾಲು, ಅಮರೇಶ ಸೇರಿ ಅನೇಕರಿದ್ದರು.

## ಮಾದಕ ವಸ್ತುಗಳು ದುಷ್ಪರಿಣಾಮ ಕುರಿತು ಜಾಗೃತಿ ಕಾರ್ಯಕ್ರಮ ಮಾದಕ ವ್ಯಸನದಿಂದ ಜೀವನ ಬಲಿ-ಡಿಸಿ ನಿತೀಶ

ಮರೆಮಾಚದೇ ಸ್ನೇಹಿತರು ಅಥವಾ ಶಿಕ್ಷಕರೊಂದಿಗೆ ಹಂಚಿಕೊಳ್ಳಬೇಕು. ವೈದ್ಯಕೀಯ ಹೊರತಾಗಿ ಹವ್ಯಾಸಗಳು, ಕ್ರೀಡೆಗಳಿಗೆ ಸಮಯ ಮೀಸಲಿಡಬೇಕು. ಸಹಪಾಠಿಗಳಲ್ಲಿ ಬದಲಾವಣೆ ಕಂಡರೆ ಗಮನಿಸಿ ಸಹಾಯ ಮಾಡಬೇಕು ಎಂದು ಸಲಹೆ ನೀಡಿದರು. ಇದೇ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸುಗಿರಿ ಮಾತನಾಡಿ, ಡ್ರಗ್ಸ್ ನಿಯಂತ್ರಣಕ್ಕೆ ಸರಬರಾಜು ತಡೆಯುವುದು ಅತ್ಯಂತ ಮುಖ್ಯವಾಗಿದ್ದು, ವೈದ್ಯಕೀಯ ಕ್ಷೇತ್ರದಲ್ಲೇ ಡ್ರಗ್ಸ್ ಬಳಕೆ ಹಾಗೂ ಸರಬರಾಜು ಚೈನ್ ಹೆಚ್ಚುತ್ತಿರುವುದು ಗಂಭೀರ ವಿಷಯ ಎಂದು ಹೇಳಿದರು.

ವೈದ್ಯಕೀಯ ವಿದ್ಯಾರ್ಥಿಗಳು ಮತ್ತು ವೈದ್ಯರು ಮೂರು ರೀತಿಯಲ್ಲಿ ಡ್ರಗ್ಸ್ ಸಮಸ್ಯೆಯಲ್ಲಿ ಸಿಲುಕುತ್ತಿರುವುದು ಅತ್ಯಂತ ಅಪಾಯಕಾರಿ ಸಂಗತಿಯಾಗಿದೆ. ಎಂಬಿಬಿಎಸ್ ಸೇರಿದಂತೆ ದೀರ್ಘಾವಧಿಯ ವೈದ್ಯಕೀಯ ಶಿಕ್ಷಣದಲ್ಲಿ ಮಾನಸಿಕ ಮತ್ತು ದೈಹಿಕ ಒತ್ತಡ ಹೆಚ್ಚಿದ್ದು, ಅದನ್ನು ತಗ್ಗಿಸಿಕೊಳ್ಳಲು ಕೆಲವರು ಡ್ರಗ್ಸ್ ಬಳಕೆ ಮಾಡುತ್ತಿರುವುದು ಕಂಡು ಬರುತ್ತಿದೆ. ಇದು ಶಿಕ್ಷಣ ಕ್ಷೇತ್ರದಲ್ಲೇ ದುರುಪಯೋಗಕ್ಕೆ ಕಾರಣವಾಗುತ್ತದೆ ಎಂದು ಎಚ್ಚರಿಸಿದರು.

ವೈದ್ಯರು ಪೆಡ್ಲರ್ ಆಗುತ್ತಿದ್ದು, ಮಂಗಳೂರು ಸೇರಿದಂತೆ ಕೆಲವು ವೈದ್ಯಕೀಯ ಕೇಂದ್ರಗಳಲ್ಲಿ ನಡೆದ ದಾಳಿಗಳ ವೇಳೆ ವಿದ್ಯಾರ್ಥಿಗಳು, ರೆಸಿಡೆಂಟ್ ವೈದ್ಯರು ಸೇರಿದಂತೆ ಹಲವರು ಡ್ರಗ್ಸ್ ಪ್ರಕರಣಗಳಲ್ಲಿ ಸಿಲುಕಿದ್ದು, 21 ವೈದ್ಯರ ಮೆಡಿಕಲ್ ಲೈಸೆನ್ಸ್ ಅಮಾನತುಗೊಂಡ ಘಟನೆ ಉದಾಹರಣೆಯಾಗಿದೆ ಎಂದು ಹೇಳಿದರು.

ಕೊವಿಡ್ ಸಂದರ್ಭದಲ್ಲಿ ಅಂಬ್ಯುಲೆನ್ಸ್ ಹಾಗೂ ವೈದ್ಯರ ವಾಹನಗಳನ್ನು ಬಳಸಿಕೊಂಡು ಡ್ರಗ್ಸ್ ಸಾಗಣೆ ನಡೆದಿರುವ ಪ್ರಕರಣಗಳೂ ಬೆಳಕಿಗೆ ಬಂದಿವೆ. ವೈದ್ಯರನ್ನು ಯಾರೂ ಅನುಮಾನಿಸುವುದಿಲ್ಲ ಎಂಬ ನಂಬಿಕೆಯನ್ನು ದುರುಪಯೋಗ ಪಡಿಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು. ಡ್ರಗ್ಸ್ ಸರಬರಾಜು ಸರಪಳಿಯಲ್ಲಿ ವೈದ್ಯರು, ಫಾರ್ಮಾಸಿಸ್ಟ್, ಕೆಮಿಸ್ಟ್ ಹಾಗೂ ಡ್ರೈವರ್‌ಗಳ ಭಾಗವಹಿಸುವಿಕೆ ಕಂಡುಬರುತ್ತಿದ್ದು, ಪ್ರತಿಯೊಬ್ಬರೂ ಪಾಲು ಪಡೆದುಕೊಳ್ಳುವ ವ್ಯವಸ್ಥೆ ಇದೆ. ಯಾರೂ ಕೂಡ ಈ ರೀತಿಯ ಸರಪಳಿಯ ಭಾಗವಾಗಬಾರದು ಎಂದು ಎಚ್ಚರಿಕೆ ನೀಡಿದರು. ಜಿಲ್ಲೆಯಲ್ಲಿ ಗಾಂಜಾ ಬಳಕೆ ಪ್ರಮುಖವಾಗಿದ್ದು, ಈ ವರ್ಷ ಈಗಾಗಲೇ 93 ಪ್ರಕರಣಗಳು ದಾಖಲಾಗಿವೆ. ವಿಶೇಷವಾಗಿ ಆಂಧ್ರ ಪ್ರದೇಶದಿಂದ ಸೇಂದಿ ಎಂಬ ಮಾದಕ ವಸ್ತು ಸಾಗಾಣಿಕೆ ಆಗುತ್ತಿರುವುದು ಪತ್ತೆಯಾಗಿದೆ ಎಂದು ಮಾಹಿತಿ ನೀಡಿದರು. ವೈದ್ಯಕೀಯ ವೃತ್ತಿ ಸೇವೆಯ ಮಾರ್ಗವಾಗಿದ್ದು, ಡ್ರಗ್ಸ್ ವ್ಯಸನದಿಂದ ಅದನ್ನು ಹಾಳು ಮಾಡಿಕೊಳ್ಳಬಾರದು. ವೈದ್ಯರು ಸಮಾಜ ಸೇವೆಗೆ ಬಂದವರು, ಈ ಮಾರ್ಗದಿಂದ ತಪ್ಪಬೇಡಿ ಎಂದು ಕರೆ ನೀಡಿದರು. ಯಾವುದೇ ರೋಗಿ ನಿಮ್ಮ ಬಳಿ ಬಂದು ಔಷಧಿಗಳನ್ನು ಬರೆದುಕೊಡಿ. ಎಂದು ಕೇಳಿದಾಗ ಅದರ ಬಗ್ಗೆ ಗಮನ ಹರಿಸಿ ಅವರಿಗೆ ಏಕೆ ಆ ಔಷಧಿ ಬೇಕು ಎಂದು ಏಕೆಂದರೆ ಅವರು ಡ್ರಗ್ಸ್ ಸೇವನಗೆ ಔಷಧಿ ಕೇಳುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷರಾದ ಕುಮಾರಸ್ವಾಮಿ, ಜಿ.ಹರೀಶ, ಡಿವೈಎಸ್‌ಪಿ ಶಾಂತವೀರ, ರಿಮ್ಸ್ ನಿರ್ದೇಶಕ ಡಾ.ರಮೇಶ, ಪ್ರಮುಖರಾದ ರಮೇಶಬಾಬು, ಉದಯ್, ಡಾ.ವಿಜಯಶಂಕರ, ಡಾ.ಬಸವರಾಜ ಎಂ.ಪಾಟೀಲ್ ಸೇರಿದಂತೆ ಅನೇಕರಿದ್ದರು.

## ದುರಂಹಕಾರದಲ್ಲಿ ಜನರ ಸಮಸ್ಯೆ ಕೇಳುವವರಿಲ್ಲ-ರವಿಕುಮಾರ

ಸಮಸ್ಯೆ ಎದುರಿಸುತ್ತಿದ್ದಾರೆ. ಆದರೆ ನಿತ್ಯವೂ ಸಿಎಂ ಕುರ್ಚಿ ಚರ್ಚೆಯಲ್ಲಿಯೇ ಸರ್ಕಾರ ಮುಳುಗಿದೆ. ವಾರದಲ್ಲಿ ಎರಡು ಬಾರಿ ಡಿ.ಕೆ.ಶಿವುಕುಮಾರ ದೆಹಲಿರುತ್ತಿದ್ದು, ಕುರ್ಚಿ ಬದಲಾವಣೆಯಲ್ಲಿಯೇ ಕಾಲಹರಣವಾಗುತ್ತಿದೆ. ಸರ್ಕಾರ ತೊಲಗಿದರೆ ಸಾಕು ಎನ್ನುವ ಮನಸ್ಥಿತಿಗೆ ಜನರು ಬಂದು ನಿಂತಿದ್ದಾರೆ. ಪರಿಶಿಷ್ಟ ಜಾತಿಗಳ ಒಳ ಮೀಸಲು ಸಮಸ್ಯೆ ಪರಿಹರಿಸಿಲ್ಲ. ಸರ್ಕಾರ ಹಂಚಿಕೆ ಮಾಡಿರುವ ಮೀಸಲು ಪ್ರಮಾಣದಿಂದ ಯಾವ ಜಾತಿಯವರು ತೃಪ್ತರಾಗಿಲ್ಲ. ಸಿಎಂ ಅವರೇ ಆಂಜಿನೇಯ್ಯ, ಮುನಿಯಪ್ಪವರನ್ನು ಕರೆಯಿಸಿ ಹಾರ ಹಾಕಿಸಿಕೊಂಡಿದ್ದಾರೆ. ಯಾವ ಜಾತಿಯವರು ಸರ್ಕಾರ ನಿರ್ಧಾರವನ್ನು ಸ್ವಾಗತಿಸಿಲ್ಲ. ಹಿಂದುಳಿದ ವರ್ಗಗಳ ಸಮಸ್ಯೆಯೂ ಪರಿಹಾರ ಒದಗಿಸಿಲ್ಲ. ಇದೊಂದು ದುರಂಹಕಾರಿ ಸರ್ಕಾರ ವೆಂದು ಟೀಕಿಸಿದರು.

## ಮೇ.9ರಂದು ಚಿತ್ರದುರ್ಗದಲ್ಲಿ ಯಡಿಯೂರಪ್ಪನವರಿಗೆ ಅಭಿನಂದನಾ ಸಮಾರಂಭ-ರವಿಕುಮಾರ

ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಅವಿಶ್ರಾಂತ ಚೇತನ ಬಿ.ಎಸ್.ಯಡಿಯೂರಪ್ಪ ಇವರ ಅಭಿನಂದನಾ ಸಮಾರಂಭಕ್ಕೆ ರಾಜ್ಯದ ಎಲ್ಲಾ ಜಿಲ್ಲೆಗಳಿಂದಲೂ ಅಭಿಮಾನಿಗಳು, ಕಾರ್ಯಕರ್ತರು ಭಾಗವಹಿಸಲಿದ್ದಾರೆ. ಸಿದ್ದರಾಮೋತ್ಸವಕ್ಕೆ ಪರ್ಯಾಯವಾಗಿ ಕಾರ್ಯಕ್ರಮ ಆಯೋಜಿಸಿಲ್ಲ ಎಂದು ಸ್ಪಷ್ಟಪಡಿಸಿದರು. ಬಿ.ಎಸ್.ಯಡಿಯೂರಪ್ಪ ಇವರು ಪಕ್ಷ ಬಿಟ್ಟು ಹೋಗಿರುವದು ಮುಗಿದು ಹೋಗಿದ್ದು ಅದರ ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿದರು. ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ ಮಾತನಾಡಿ, ಚಿತ್ರದುರ್ಗದಲ್ಲಿ ಆಯೋಜಿಸಿರುವ ಬಿ.ಎಸ್.ಯಡಿಯೂರಪ್ಪನವರ ಅಭಿನಂದನಾ ಸಮಾವೇಶಕ್ಕೆ ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರದಿಂದ ಮೂರು ಸಾವಿರ ಜನರು ತೆರಳಲು ಸಿದ್ದತೆ ಮಾಡಿಕೊಳ್ಳಲಾಗಿದೆ. ಈಗಾಗಲೇ ಪೂರ್ವಸಿದ್ದತಾ ಸಭೆಗಳನ್ನು ನಡೆಸಿ ಕಾರ್ಯಕರ್ತರು ತೆರಳು ನಿರ್ಧರಿಸಲಾಗಿದೆ ಎಂದರು.ಈ ಸಂದರ್ಬದಲ್ಲಿ ಮಾಜಿ ಸಂಸದ ಬಿ.ವಿ.ನಾಯಕ, ಬಸನಗೌಡ ಬ್ಯಾಗವಾಟ, ಪ್ರತಾಪಗೌಡ ಪಾಟೀಲ್, ತ್ರಿವಿಕ್ರಮ ಜೋಷಿ, ಜಂಬಣ್ಣ ನಿಲೋಗಲ್ ,ಸಿದ್ದನಗೌಡ ನೆಲಹಾಳ, ಸಂತೋಷ ರಾಜಗುರು, ವಿಷ್ಣುವರ್ಧನ ರೆಡ್ಡಿ ಇದ್ದರು.

## ಎಸ್‌ಯುಸಿಐ ಸಂಸ್ಥಾಪನಾ ದಿನಾಚರಣೆ : ದೇಶದ ಬಿಕ್ಕಟ್ಟಿಗೆ ಮಾರ್ಕ್ಸವಾದ ಪರಿಹಾರ-ಎಂ.ಶಶಿಧರ

ಭುಗಿಲೆದ್ದಿದೆ. ಆದರೆ, ಈ ಹೋರಾಟಗಳು ಸಾಗರದ ಅಲೆಗಳಂತೆ ಅಬ್ಬರದಿಂದ ಬರುತ್ತವೆ ಮತ್ತು ಹೋಗುತ್ತವೆ; ಇಷ್ಟೆಲ್ಲಾ ಬಲವಾದ ಜನಾಕ್ರೋಷವಿದ್ದರೂ ಸಹ ಈ ಚಳವಳಿಗಳು ಸರಿಯಾದ ಗುರಿ ತಲುಪುವುದಿಲ್ಲ. ಇದಕ್ಕೆ ಮುಖ್ಯ ಕಾರಣವೆಂದರೆ ಆ ಹೋರಾಟಗಳನ್ನು ಕ್ರಾಂತಿಯ ಹಾದಿಯಲ್ಲಿ ಮುನ್ನಡೆಸಲು ಬೇಕಾದ ನೈಜ ಕಮ್ಯುನಿಸ್ಟ್ ಪಕ್ಷದ ಕೊರತೆ ಕಾಣುತ್ತಿದೆ. ಕ್ರಾಂತಿಕಾರಿ ಸಿದ್ಧಾಂತ ಮತ್ತು ನಾಯಕತ್ವ ಇಲ್ಲದ ಕಾರಣ ಇಂತಹ ಮಹಾನ್ ಹೋರಾಟಗಳು ದಾರಿ ತಪ್ಪುತ್ತಿವೆ. ಹಾಗಾಗಿ, ಈ ಐತಿಹಾಸಿಕ ಘಳಿಗೆಯಲ್ಲಿ ಇಡೀ ಪ್ರಪಂಚದ ಜನತೆಗೆ ದಾರಿದೀಪವಾಗಿರುವುದು ಕಾಮ್ರೆಡ್ ಶಿವದಾಸ್ ಘೋಷ್ ಅವರ ವಿಚಾರಗಳು ಮಾತ್ರ. ಹಾಗಾಗಿ ಬಂಡವಾಳಶಾಹಿ ವಿರೋಧಿ ಸಮಾಜವಾದಿ ಕ್ರಾಂತಿಯೊಂದೇ ಅಂತಿಮ ಪರಿಹಾರ ನೀಡಬಲ್ಲದು ಎಂದು ತಿಳಿಸಿದರು.

ಜಿಲ್ಲಾ ಕಾರ್ಯದರ್ಶಿ ಡಾ. ಚಂದ್ರ ಗಿರೀಶ್ ಅಧ್ಯಕ್ಷತೆ ವಹಿಸಿ ಮಾತನಾಡಿ, 1948 ಏಪ್ರಿಲ್ 24ರಂದು ಸ್ವಾತಂತ್ರ್ಯ ಹೋರಾಟದ ರಾಜಿರಹಿತ ಪಂಥದ ಕ್ರಾಂತಿಕಾರಿ ಹೋರಾಟಗಾರ ಕಾಮ್ರೆಡ್ ಶಿವದಾಸ್ ಘೋಷ್ ಅವರು ಭಾರತದ ನೆಲದಲ್ಲಿ ಏಕೈಕ ನೈಜ ಕಮ್ಯುನಿಸ್ಟ್ ಪಕ್ಷವಾಗಿ ಎಸ್‌ಯುಸಿಐ (ಸಿ) ಅನ್ನು ಸ್ಥಾಪಿಸಿದರು. ಅಂದಿನ ಕಾಲಘಟ್ಟದಲ್ಲಿ ಇದ್ದ ಸಿಪಿಐ ಸರಿಯಾದ ಕಮ್ಯುನಿಸ್ಟ್ ಹೋರಾಟದ ಹಾದಿಯನ್ನು ಅನುಸರಿಸಲು ವಿಫಲವಾಗಿ ಮುಗ್ಗರಿಸಿತು. ನಂತರ ಸಿಪಿಐ, ಸಿಪಿಎಂ ಆಗಿ ವಿಭಜನೆ ಆಯಿತು. ಈಗ ಹಲವಾರು ಗುಂಪುಗಳಾಗಿ ಒಡೆದು ಹೋಗಿದೆ ಎಂದರು. ಎಸ್‌ಯುಸಿಐ (ಸಿ) ಪಕ್ಷವನ್ನು ಶಿವದಾಸ್ ಘೋಷ್ ಅವರು ಏಕಾಂಗಿಯಾಗಿ ಕೆಲವೇ ದಿನ ಸಂಗಾತಿಗಳೊಂದಿಗೆ ಕಾರ್ಮಿಕರ ಮತ್ತು ಶೋಷಿತರ ಆಶೋತ್ತರಗಳಿಗೆ ನೈಜ ಧ್ವನಿಯಾಗಿ ಕಟ್ಟಿ ಬೆಳೆಸಿದರು ಎಂದರು. ಇಂದು ಅವರ ಚಿಂತನೆಗಳ ಆಧಾರದಲ್ಲಿ ಉನ್ನತ ನೀತಿ- ಸಂಸ್ಕೃತಿ ಆಧಾರದ ಮೇಲೆ ಒಂದು ಕುಟುಂಬವಾಗಿ ಪಕ್ಷ ಬೆಳೆಯುತ್ತಿದೆ ಎಂದು ಹೇಳಿದರು.

ಜಿಲ್ಲಾ ಸಮಿತಿ ಸದಸ್ಯರಾದ ವೀರೇಶ್ ಎನ್ ಎಸ್ ಅವರು ಪ್ರಾಸ್ತಾವಿಕ ಮಾತನಾಡಿದರು. ವೇದಿಕೆಯ ಮೇಲೆ ಜಿಲ್ಲಾ ಸಮಿತಿ ಸದಸ್ಯ ಚನ್ನಬಸವ ಜಾನೇಕಲ್, ಮಹೇಶ್ ಚೀಕಲಪರ್ವಿ, ರಾಮಣ್ಣ ಎಂ, ಅಣ್ಣಪ್ಪ ಉಪಸ್ಥಿತರಿದ್ದರು. ಪಕ್ಷದ ಸದಸ್ಯರು,ಹಿತೈಷಿಗಳು ಹಾಗೂ ಬೆಂಬಲಿಗರು ಈ ಸಭೆಯಲ್ಲಿ ಭಾಗವಹಿಸಿದ್ದರು.

## ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕಾಂದೂ ಪತ್ನಿಗೆ ಹೆರಿಗೆ: ಮಾದರಿಯಾದ ಸಿಇಓ

ದ್ದಾರೆ. ಸರಕಾರದಲ್ಲಿ ಕರ್ತವ್ಯ ನಿರ್ವಹಿಸುವ ಉನ್ನತ ಐಎಎಸ್ ಅಧಿಕಾರಿಯು ಸರಕಾರಿ ಆಸ್ಪತ್ರೆಯ ಸೌಲಭ್ಯಗಳ ಬಗ್ಗೆ ಜನ ಸಾಮಾನ್ಯರಿಗೆ ಹತ್ತಿರವಾಗಿಸುವ ಪ್ರಯತ್ನವಾಗಿದೆ ಎಂಬ ಸಂಗತಿಯು ಜಿಲ್ಲೆಯಲ್ಲಿ ಜನತೆಯಲ್ಲಿ ಸಂಚಲನ ಉಂಟು ಮಾಡಿದೆ.

ಸರಕಾರದ ಸೌಲಭ್ಯ ಪ್ರತಿಯೊಬ್ಬರು ಪಡೆಯಿರಿ : ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪತ್ರಿಕೆಗಳೊಂದಿಗೆ ಮಾತನಾಡಿ, ಕರ್ನಾಟಕ ಸರಕಾರವು ಇಂದು ಗ್ರಾಮೀಣ ಪ್ರದೇಶ ಸೇರಿದಂತೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ತಾಯಿ ಮಗುವಿನ ಆರೈಕೆಗಾಗಿ ನುರಿತ ಹೆರಿಗೆ ತಜ್ಞರು, ಸುಸಜ್ಜಿತ ಹೆರಿಗೆ ಕೊಠಡಿ, ಆಧುನಿಕ ಪರಿಕರಗಳು, ಸೂಕ್ತ ಪ್ರಯೋಗಾಲಯ ಪರೀಕ್ಷೆಗಳು, ಸಕಾಲದಲ್ಲಿ ಔಷಧೋಪಚಾರ, ಪೌಷ್ಟಿಕ ಆಹಾರ ಒದಗಿಸುವುದನ್ನು ಖುದ್ದು ಪರಿಶೀಲನೆಯಲ್ಲಿ ಕಂಡು ಬರುತ್ತಿರುವುದರಿಂದ ಸರಕಾರದ ಸೌಲಭ್ಯಗಳು ಜನಸಮಾನ್ಯರು ಪಡೆಯಲಿ ಎಂದು ತಾಯಿ ಮಕ್ಕಳ ಆಸ್ಪತ್ರೆ ಅಥವಾ ರಿಮ್ಸ್ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸುವ ನಿರ್ಧಾರ ಕೈಗೊಂಡಿದ್ದು, ರಿಮ್ಸ್‌ನಲ್ಲಿ ಹೆರಿಗೆಯಾಗಿದ್ದು ಪ್ರಸ್ತುತ ಮುಂದಿನ ಆರೈಕೆಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮಾರ್ಗದರ್ಶನದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ವಹಣೆಯಲ್ಲಿರುವ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆ ಪಡೆಯುತ್ತಿದ್ದಾರೆ. ಇದು ವೈಯಕ್ತಿಕವಾಗಿ ನಮಗೆ ಹೆಮ್ಮೆಯ ವಿಷಯವಾಗಿದೆ ಎಂದಿದ್ದಾರೆ.

## ಪ್ರಾಧ್ಯಾಪಕ ನೇಮಕಾತಿಯಲ್ಲಿ ಅಕ್ರಮ ವ್ಯವಹಾರ ದೂರು-ಡಾ.ರವಿಕುಮಾರ

ಪ್ರಾಧ್ಯಾಪಕನಾಗಿ ಪರಿಗಣಿಸಲಾಗಿದೆ. ಆದರೆ ಲಕ್ಷ್ಮೀಕಾಂತ ಇಸ್ಟ್ರೂಮೆಂಟ್ ಕೋರ್ಸ ಓದಿದ್ದು ಭೌತಶಾಸ್ತ್ರ ಸಹಾಯಕ ಪ್ರಾಧ್ಯಾಪಕನಾಗಿ ಪರಿಗಣಿಲಾಗುತ್ತಿದೆ. ಕಾನೂನು ಬಾಹಿರವಾಗಿ ಹಣ ವ್ಯವಹಾರ ನಡೆಸಿ ನೇಮಕಾತಿ ನಡೆಸಿರುವ ಸಂಶಯಗಳಿವೆ. ಅನುಕೂಲ ಸಿಂಧೂ ನಿಯಮಗಳನ್ನು ರೂಪಿಸಿ ತಮಗೆ ಬೇಕಾದವರಿಗೆ ಅವಕಾಶ ನೀಡುವ ಹುನ್ನಾರ ನಡೆದಿದು ಕೂಡಲೇ ನಿಲ್ಲಿಸಬೇಕು. ಇಲ್ಲದೇ ಹೋದರೆ ದೂರು ನೀಡುವದಾಗಿ ಹೇಳಿದರು.

ಈ ಸಂದರ್ಬದಲ್ಲಿ ಜಾನ್ ಸನ್, ಅಂಜಿಬಾಬು, ಕೆ.ಶಂಭುನಾಥ, ಪ್ರಭಾಕರ ಇದ್ದರು.

# ಪಿಯುಸಿ ವಿದ್ಯಾರ್ಥಿನಿಯರು ನಾಪತ್ತೆ ಪ್ರಕರಣ: ಸಿಐಡಿಗೆ ವರ್ಗಾವಣೆ

■ ಕನ್ನಡ ಮಾತೃ ಭೂಮಿ ವಾರ್ತೆ




ಬೆಂಗಳೂರಿನಲ್ಲಿ ಇಬ್ಬರು ಪಿಯು ವಿದ್ಯಾರ್ಥಿನಿಯರಾದ ತನಿಷ್ಕಾ ಮತ್ತು ತೇಜಸ್ವಿನಿ ನಾಪತ್ತೆ ಪ್ರಕರಣದ ತನಿಖೆಯನ್ನು ಸಿಐಡಿಗೆ ವರ್ಗಾಯಿಸಿ ಆದೇಶ ಹೊರಡಿಸಲಾಗಿದೆ.

ವಿದ್ಯಾರಣ್ಯಪುರ ಠಾಣಾ ವ್ಯಾಪ್ತಿಯಲ್ಲಿ ಜನವರಿ 31ರಂದು ನಾಪತ್ತೆಯಾಗಿದ್ದ ವಿದ್ಯಾರ್ಥಿನಿಯರು ಮೂರು ತಿಂಗಳು ಕಳೆದರೂ ಇನ್ನೂ ಪತ್ತೆಯಾಗಿಲ್ಲ. ವಿದ್ಯಾರ್ಥಿನಿಯರು ಆಧಾರ್ ಕಾರ್ಡ್‌ನೊಂದಿಗೆ ಮನೆ ಬಿಟ್ಟು ಹೋಗಿದ್ದು, ಅವರ ಓಡಾಟದ ಸಿಸಿಟಿವಿ ದೃಶ್ಯಗಳು ಸಹ ಲಭ್ಯವಾಗಿದ್ದವು. ಆದರೂ, ಪೊಲೀಸರಿಗೆ ಈವರೆಗೆ ಅವರ ಬಗ್ಗೆ ಯಾವುದೇ ಸುಳಿವು ಸಿಕ್ಕಿಲ್ಲ. ಪ್ರಕರಣವನ್ನು ಸಿಬಿಐಗೆ ವಹಿಸುವಂತೆ ಪೋಷಕರು ಈ ಹಿಂದೆ ಮನವಿ ಮಾಡಿದ್ದರು. ಅಲ್ಲದೆ, ಹೈಕೋರ್ಟ್‌ನಲ್ಲಿ ಹೆಬಿಯಸ್ ಕಾರ್ಪಸ್ ಅರ್ಜಿ ಕೂಡ ಸಲ್ಲಿಸಿದ್ದರು.

ಇದೀಗ, ಈ ಪ್ರಕರಣದ ಸಂಪೂರ್ಣ ವರದಿಯನ್ನು ವಿದ್ಯಾರಣ್ಯಪುರ ಠಾಣಾ ಪೊಲೀಸರು ಸಿಐಡಿಗೆ ಹಸ್ತಾಂತರಿಸಿದ್ದಾರೆ. ಸಿಐಡಿ ತಂಡವು ನಾಪತ್ತೆಯಾಗಿರುವ ತನಿಷ್ಕ ಮತ್ತು ತೇಜಸ್ವಿನಿ ಪತ್ತೆ ಕಾರ್ಯವನ್ನು ಮುಂದುವರಿಸಲಿದೆ.

ವಿದ್ಯಾರ್ಥಿನಿಯರ ಪತ್ತೆಗಾಗಿ ವಿದ್ಯಾರಣ್ಯಪುರ ಪೊಲೀಸರು ರಚಿಸಿದ್ದ 10 ಸದಸ್ಯರ ವಿಶೇಷ ತಂಡವು ಕಳೆದ 70 ದಿನಗಳಿಂದ ಅಹೋರಾತ್ರಿ ಹುಡುಕಾಟ ನಡೆಸಿದೆ. ಮುಂಬೈ, ಚೆನ್ನೈ, ಕೊಯಮತ್ತೂರು, ದೆಹಲಿ, ಕಾಶಿ, ಚಾಮರಾಜನಗರ ಹಾಗೂ ಮೈಸೂರು ಸೇರಿದಂತೆ ದೇಶದ ಹಲವೆಡೆ ಪೊಲೀಸರು ಗಾಳ ಹಾಕಿದ್ದಾರೆ. ಸದ್ಯದ ಮಾಹಿತಿ ಪ್ರಕಾರ, ವಿಶೇಷ ತಂಡವೊಂದು ಕೇರಳದಲ್ಲಿ ಬೀಡು ಬಿಟ್ಟು ತಲಾಶ್ ನಡೆಸುತ್ತಿದೆ.ಪೊಲೀಸರಿಗೆತಾಂತ್ರಿಕ ಸಾಕ್ಷ್ಯಗಳ ಕೊರತೆಯಿಂದ ವಿದ್ಯಾರ್ಥಿಗಳ ಪತ್ತೆ ಸಮಸ್ಯೆಯಾಗಿದೆ. ಈ ವಿದ್ಯಾರ್ಥಿನಿಯರು ಮೊಬೈಲ್ ಫೋನ್ ಬಳಸುತ್ತಿಲ್ಲ ಹಾಗೂ ಎಟಿಎಂ ಕಾರ್ಡ್‌ಗಳನ್ನು ಸಹ ಮುಟ್ಟುತ್ತಿಲ್ಲ. ಜೊತೆಗೆ ಸ್ನೇಹಿತರು ಅಥವಾ ಕುಟುಂಬದವರನ್ನು ಯಾವುದೇ ರೀತಿಯಲ್ಲೂ ಸಂಪರ್ಕಿಸುತ್ತಿಲ್ಲ. ಕೈಯಲ್ಲಿ ಆಧಾರ್ ಕಾರ್ಡ್ ಹಿಡಿದು ರಾಜ್ಯದಾದ್ಯಂತ ಶಕ್ತಿಟಿ ಯೋಜನೆಯಡಿ ಉಚಿತ ಬಸ್ ಪ್ರಯಾಣ ಮಾಡುತ್ತಿರುವುದು ಸಿಸಿಟಿವಿ ದೃಶ್ಯಗಳಿಂದ ಈ ಹಿಂದೆ ಪತ್ತೆಯಾಗಿತ್ತು.

ಒಂದು ಹಂತದಲ್ಲಿ ಪೊಲೀಸರಿಗೆ ಈ ವಿದ್ಯಾರ್ಥಿನಿಯರು ಮಲೆಮಹದೇಶ್ವರ ಬೆಟ್ಟದ ವ್ಯಾಪ್ತಿಯಲ್ಲಿದ್ದಾರೆ ಎಂಬ ಸುಳಿವು ಸಿಕ್ಕಿತ್ತು. ಆದರೆ ಪೊಲೀಸರು ಅಲ್ಲಿಗೆ ತಲುಪುವಷ್ಟರಲ್ಲಿ ಅವರು ಅಲ್ಲಿಂದ ನಾಪತ್ತೆಯಾಗಿದ್ದಾರೆ. ಕೇವಲ 3,000 ರೂಪಾಯಿ ಹಣ ಹಿಡಿದು ಹೋದವರು ಇಷ್ಟು ದಿನ ಅಜ್ಞಾತರಾಗಿರುವುದು ಹೇಗೆ? ಎಲ್ಲಿಯೂ ಯುಡಿಆರ್ ಕೇಸ್‌ಗಳು ದಾಖಲಾಗಿಲ್ಲದ ಕಾರಣ, ಅವರು ತಟಸ್ಥವಾಗಿದ್ದುಕೊಂಡು ತಲೆಮರೆಸಿಕೊಂಡಿದ್ದಾರೆ ಎಂಬುದು ಪೊಲೀಸರ ಬಲವಾದ ಶಂಕೆಯಾಗಿದೆ.

# ಮುಂಡ್ರಿಗಿ ನಾಗರಾಜ್ ಸಂತೋಷ್ ಲಾಡ್ ಸಮ್ಮುಖದಲ್ಲಿ ಅಂಬೇಡ್ಕರ್ ಜಯಂತಿ ಸಂಭ್ರಮ



■ ಕನ್ನಡ ಮಾತೃ ಭೂಮಿ ವಾರ್ತೆ

**ಬೀದರ್,**ಮಾದರಾ ಹಾಗೂ ಮರಾಠ ಸಮುದಾಯದ ವತಿಯಿಂದ ನಗರದಲ್ಲಿನ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಹಮ್ಮಿಕೊಂಡಿದ್ದ ಡಾ. ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮವು ವಿಜೃಂಭಣೆಯಿಂದ ನಡೆಯಿತು.

ಕಾರ್ಯಕ್ರಮ ಉದ್ಘಾಟನೆಗಾಗಿ ಆಗಮಿಸಿದ ಕಾರ್ಮಿಕ ಇಲಾಖೆ ಸಚಿವರಾದ ಸಂತೋಷ್ ಎಸ್.ಲಾಡ್ ಅವರನ್ನು ಡಾ. ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ನಾಯಕ ಮುಂಡ್ರಿಗಿ ನಾಗರಾಜ್ ಅವರು ಆತ್ಮೀಯವಾಗಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲೆಯ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಎ.ಮಾನಯ್ಯ, ಜಿಲ್ಲಾ ದಲಿತ ಸಂಘರ್ಷ ಸಮಿತಿ ಸಂಚಾಲಕ ಜಿ. ಗೋವರ್ಧನ ಸೇರಿದಂತೆ ಬೀದರ್ ಜಿಲ್ಲೆಯ ಮಾದಿಗ ಮತ್ತು ಮರಾಠ ಸಮುದಾಯದ ಮುಖಂಡರು, ಕಾಂಗ್ರೆಸ್ ಪಕ್ಷದ ನಾಯಕರು, ಕಾರ್ಯಕರ್ತರು, ಸಾರ್ವಜನಿಕರು ಹಾಗೂ ಸಚಿವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣ: ನ್ಯಾಯಯುತ ತನಿಖೆಗೆ ಸಚಿವ ಪ್ರಲ್ಹಾದ ಜೋಶಿ ಸೂಚನೆ



- ತಪ್ಪಿತಸ್ಥ ಪೊಲೀಸ್ ಸಿಬ್ಬಂದಿ ಅಮಾನತಿಗೆ ಕೇಂದ್ರ ಸಚಿವರ ಆಗ್ರಹ
- ಅಮಾಯಕ ವಿದ್ಯಾರ್ಥಿ ಕುಟುಂಬಕ್ಕೆ ನ್ಯಾಯ ಸಿಗುವವರೆಗೂ ಹೋರಾಟದ ಎಚ್ಚರಿಕೆ

**ನವದೆಹಲಿ,**ಧಾರವಾಡ ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣದಲ್ಲಿ ಕುಟುಂಬಕ್ಕೆ ನ್ಯಾಯ ಸಿಗುವವರೆಗೂ ಹೋರಾಟ ನಡೆಸುವುದಾಗಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಎಚ್ಚರಿಸಿದ್ದಾರೆ.

ಧಾರವಾಡಕ್ಕೆ ಓದಲು ಬಂದಿದ್ದ ಬಾಗಲಕೋಟೆ ಮೂಲದ ವಿದ್ಯಾರ್ಥಿ ಆದಿತ್ಯ ಮ್ಯಾಗೇರಿ ಆತ್ಮಹತ್ಯೆ ಅತ್ಯಂತ ನೋವಿನ ಸಂಗತಿ ಎಂದು ತೀವ್ರ ಬೇಸರ ವ್ಯಕ್ತಪಡಿಸಿರುವ ಸಚಿವರು, ಅಮಾಯಕ ವಿದ್ಯಾರ್ಥಿಯನ್ನು ಈ ಪ್ರಕರಣದಲ್ಲಿ ಸಿಲುಕಿಸುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದ್ದಾರೆ.

ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣದ ಬಗ್ಗೆ ಶೀಘ್ರವೇ ನ್ಯಾಯಯುತ ತನಿಖೆ ನಡೆಸುವಂತೆ ಹಾಗೂ ಪ್ರಕರಣದಲ್ಲಿ ಭಾಗಿಯಾದ ತಪ್ಪಿತಸ್ಥ ಪೊಲೀಸ್ ಇನ್ಸಪೆಕ್ಟರ್ ಮತ್ತು

ಸಿಬ್ಬಂದಿಯನ್ನು ಕೂಡಲೇ ಅಮಾನತುಗೊಳಿಸಿ, ಕಠಿಣ ಕ್ರಮ ಕೈಗೊಳ್ಳಬೇಕೆಂದು ಪೊಲೀಸ್ ಆಯುಕ್ತರಿಗೆ ದೂರವಾಣಿ ಕರೆ ಮಾಡಿ ಸೂಚನೆ ನೀಡಿದ್ದಾರೆ.

ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ತೀವ್ರ ಹದಗೆಟ್ಟಿದ್ದು, ರಾಜ್ಯ ಸರ್ಕಾರ ಇಡೀ ಪ್ರಕರಣದ ನೈತಿಕ ಹೊಣೆ ಹೊರಬೇಕು ಮತ್ತು ಮೃತ ವಿದ್ಯಾರ್ಥಿಯ ಕುಟುಂಬಕ್ಕೆ ಪರಿಹಾರ ನೀಡಬೇಕೆಂದು ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ.

# ವಿಜಯನಗರ ಜಿಲ್ಲೆ, ಕೊಟ್ಟೂರು ತಾಲೂಕು ಮಾದಕ ದ್ರವ್ಯ ಜಾಗೃತಿ ಅಭಿಯಾನ ಯಶಸ್ವಿ

■ ಕನ್ನಡ ಮಾತೃ ಭೂಮಿ ವಾರ್ತೆ




ವಿಜಯನಗರ ಜಿಲ್ಲೆ ಕೊಟ್ಟೂರು ತಾಲೂಕಿನಲ್ಲಿ ದಿನಾಂಕ 29/04/2026 ರಂದು ಕೊಟ್ಟೂರೇಶ್ವರ ಮಹಾ ವಿದ್ಯಾಲಯದಲ್ಲಿ **Anti&Ragging Cell, IQAC, NCC, NSS** ಹಾಗೂ ಕೊಟ್ಟೂರು ಪೊಲೀಸ್ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಮಾದಕ ದ್ರವ್ಯ ಜಾಗೃತಿ ಅಭಿಯಾನವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಎಂ. ರವಿಕುಮಾರ್ ವಹಿಸಿ ಮಾತನಾಡಿ, ಆರೋಗ್ಯಕರ ದೇಶ ನಿರ್ಮಾಣಕ್ಕೆ ಯುವಜನತೆ ಮೊದಲು ಮಾದಕ ವ್ಯಸನಗಳಿಂದ ದೂರವಿರಬೇಕು. ಯುವಕರು ಆರೋಗ್ಯಕರ ಜೀವನ ಶೈಲಿಯನ್ನು ಅಳವಡಿಸಿಕೊಂಡಾಗ ಮಾತ್ರ ದೇಶ ಸದೃಢವಾಗಲು ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೊಟ್ಟೂರು ಪೊಲೀಸ್ ಠಾಣೆಯ ಪಿಎಸ್‌ಐ ಗೀತಾಂಜಲಿ ಶಿಂದೆ, ಇಂದಿನ ವಿದ್ಯಾರ್ಥಿಗಳು ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಮಾದಕ ಚಟಗಳಿಂದ ದೂರವಿರುವುದು ಅತ್ಯಗತ್ಯ. ವಿದ್ಯಾರ್ಥಿ ಜೀವನವನ್ನು ಸದುಪಯೋಗಪಡಿಸಿಕೊಂಡು ಸಮಾಜ ನಿರ್ಮಾಣದಲ್ಲಿ ತಮ್ಮ ಪಾತ್ರವನ್ನು ನಿಭಾಯಿಸಬೇಕು. ಯಾವುದೇ ಕೆಟ್ಟ ಚಟಗಳಿಗೆ ಒಳಗಾಗದೆ ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನ ಹರಿಸಿ ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.ಕಾರ್ಯಕ್ರಮದಲ್ಲಿ **Anti&Ragging** ಸಂಯೋಜಕರಾದ ಡಾ. ಶಿವಕುಮಾರ್, **IQAC** ಸಂಯೋಜಕರಾದ ಪೃಥ್ವಿರಾಜ್, **NSS** ಸಂಯೋಜಕರಾದ ಉಮೇಶ್, ಕೆ.ಓ. ಶಿವಪ್ರಕಾಶ್, ರಮೇಶ್ ಎಚ್.ವಿ., ಕೊಟ್ರೇಶ್, ವೀಣಾ, ಪೂಜಾ, ನಯನ ಸೇರಿದಂತೆ ಪೊಲೀಸ್ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಬೆಂಗಳೂರು, ಮೈಸೂರು, ಮಂಗಳೂರಿನಲ್ಲಿ ಸುಸ್ಥಿರ ಡೇಟಾ ಪಾರ್ಕ್ ಸ್ಥಾಪನೆ-ಪ್ರಿಯಾಂಕ್ ಖರ್ಗೆ!

■ ಕನ್ನಡ ಮಾತೃ ಭೂಮಿ ವಾರ್ತೆ



**ಬೆಂಗಳೂರು,ಏ.30-**ರಾಜ್ಯದಲ್ಲಿ ಕೈಗಾರಿಕಾ ಬೆಳವಣಿಗೆಗೆ ಸುಸ್ಥಿರ ಡೇಟಾ ಕೇಂದ್ರಗಳು (ಸಸ್ಟೇನಬಲ್ ಡೇಟಾ ಸೆಂಟರ್ಸ್) ಅಗತ್ಯವಿದ್ದು ಬೆಂಗಳೂರು, ಮೈಸೂರು ಮತ್ತು ಮಂಗಳೂರಿನಲ್ಲಿ ಡೇಟಾ ಪಾರ್ಕ್ ಸ್ಥಾಪಿಸಲು ಗುರುವಾರ ನಡೆದ ಸಂಬಂಧಿತ ಸಚಿವರ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ನಗರದ ಶಕ್ತಿ ಭವನದಲ್ಲಿ ನಡೆದ ಈ ಪ್ರಾಥಮಿಕ ಸಭೆಯಲ್ಲಿ ಇಂಧನ ಸಚಿವ ಕೆ ಜೆ ಜಾರ್ಜ, ಬೃಹತ್ ಮತ್ತು ಮಧ್ಯಮ್ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಮತ್ತು ಐಟಿ ಸಚಿವ ಪ್ರಿಯಾಂಕ್ ಖರ್ಗೆ ಪಾಲ್ಗೊಂಡಿದ್ದರು.

ಬೆಂಗಳೂರಿನಲ್ಲಿ ಹೊಸಕೋಟೆಯ ಸಮೀಪ 500 ಮೆಗಾವ್ಯಾಟ್ ಸಾಮರ್ಥ್ಯದ ಸುಸ್ಥಿರ ಡೇಟಾ ಕೇಂದ್ರ ಪಾರ್ಕ್ ಸ್ಥಾಪಿಸಲಾಗುವುದು. ಪಾವಗಡದಿಂದ ಪೂರೈಕೆಯಾಗುವ ಸೌರ ವಿದ್ಯುತ್ ನೇರವಾಗಿ ಇಲ್ಲಿಗೆ ತಲುಪುತ್ತದೆ. ಜತೆಗೆ ಬೆಂಗಳೂರು ಜಲ್ ಮಂಡಳಿಯು ಎರಡು ಹಂತಗಳಲ್ಲಿ ಸಂಸ್ಕರಿಸಿದ 60 ಎಂ.ಎಲ್.ಡಿ ನೀರು ಪೂರೈಕೆಗೆ ತೊಂದರೆ ಇಲ್ಲ ಎಂದು ತಿಳಿಸಿದೆ. ಸ್ವತಃ ಉದ್ಯಮಗಳೇ ಈ್ ನೀರಿನ ಮೂರನೇ ಹಂತದ ಶುದ್ಧೀಕರಣ ಮಾಡಿಕೊಳ್ಳುತ್ತವೆ. ಈ ಮೂರೂ ಪಾರ್ಕುಗಳ ಒಟ್ಟು ಸಾಮರ್ಥ್ಯ 1,000 ಮೆಗಾವ್ಯಾಟ್ ಇರಲಿದೆ ಎಂದು ಸಚಿವರು ಹೇಳಿದ್ದಾರೆ.

ಮಂಗಳೂರಿನಲ್ಲಿ ಕೂಡ ಡೇಟಾ ಪಾರ್ಕ್ ಸ್ಥಾಪನೆಗೆ ಭೂಮಿಯು ಲಭ್ಯವಿದೆ. ಅಲ್ಲಿನ ಬೈಕಂಪಾಡಿ ಕೈಗಾರಿಕಾ ಪ್ರದೇಶದಲ್ಲಿ ಕೆಐಎಡಿಬಿಗೆ ಸೇರಿದ 350 ಎಕರೆ ಇದೆ. ಮೈಸೂರಿನಲ್ಲಿ ಈ ಉದ್ದೇಶಕ್ಕೆ ಸೂಕ್ತ ಜಾಗ ಗುರುತಿಸಲಾಗುವುದು ಎಂದು ಅವರು ವಿವರಿಸಿದ್ದಾರೆ.

ಈ ಪಾರ್ಕ್ ಗಳಲ್ಲಿ ಯಾರೇ ಬಂದ ಡಾಟಾ ಸೆಂಟರ್ ಸ್ಥಾಪನೆಗೆ ಹೂಡಿಕೆ ಮಾಡಿದರೆ ಅವರಿಗೆ ವಿದ್ಯುತ್ ಮತ್ತು ನೀರು ನೀಡಲಾಗುವುದು. ಇದಕ್ಕೆ ಪೂರಕವಾದ ಸಿದ್ಧತೆ ಮಾಡಿಕೊಳ್ಳಲು ಮೂವರು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಸದ್ಯದಲ್ಲೇ ಹೂಡಿಕೆದಾರರ ಜೊತೆಗೂ ಸಭೆ ಮಾಡಲು ಸಚಿವರು ಸಲಹೆ ನೀಡಿದರು.

ಇದೀಗ ಮತ್ತೊಂದು ಕ್ಷೇತ್ರದಲ್ಲಿ ಬೆಂಗಳೂರು ದೇಶದಲ್ಲಿಯೇ ನಂಬರ್ 1: ಮಾಹಿತಿ ಹಂಚಿಕೊಂಡ ಸಚಿವ ಪ್ರಿಯಾಂಕ್ ಖರ್ಗೆ!

ಮುಂದಿನ ಹಂತದಲ್ಲಿ ಜಲ ಸಂಪನ್ಮೂಲ ಖಾತೆಯನ್ನು ಹೊಂದಿರುವ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರೂ ಇರುವ ಸಚಿವರ ತಂಡವನ್ನೂ ಮತ್ತು ಉನ್ನತ ಅಧಿಕಾರಿಗಳ ತಂಡವನ್ನೂ ಈ ಸಂಬಂಧ ರಚಿಸಲಾಗುವುದು. ಒಟ್ಟಿನಲ್ಲಿ ತ್ವರಿತವಾಗಿ ಈ ಡೇಟಾ ಪಾರ್ಕುಗಳನ್ನು ಸ್ಥಾಪಿಸಲಾಗುವುದು ಎಂದು ಅವರು ನುಡಿದಿದ್ದಾರೆ.

ಸಭೆಯಲ್ಲಿ ಇಂಧನ ಮತ್ತು ಜಲ ಸಂಪನ್ಮೂಲ ಇಲಾಖೆ ಕಾರ್ಯದರ್ಶಿ ಗೌರವ್ ಗುಪ್ತ, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

# ಕಾಂಪೌಂಡ್ ಗೋಡೆ ಕುಸಿದು ಏಳು ಮಂದಿ ಸಾವು: ಮೃತರ ಕುಟುಂಬಕ್ಕೆ ತಲಾ 5ಲಕ್ಷ ರೂ ಮೊತ್ತದ ಪರಿಹಾರ ಚೆಕ್ ವಿತರಣೆ!

**ಬೆಂಗಳೂರು,ಏ.30-**ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಹಿಂಭಾಗದ ಕಾಂಪೌಂಡ್ ಗೋಡೆ ಕುಸಿದ ಪರಿಣಾಮವಾಗಿ ಮೃತಪಟ್ಟ 7 ಜನರ ಕುಟುಂಬದ ವಾರಸುದಾರ ಸದಸ್ಯರಿಗೆ ಇಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವತಿಯಿಂದ ಪರಿಹಾರದ ಚೆಕ್ ವಿತರಿಸಲಾಗಿದೆ.

ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳ ಸೂಚನೆಯಂತೆ ಇಂದು ನಗರದ ಎಂ.ಜಿ. ರಸ್ತೆಯಲ್ಲಿರುವ ಪಿ.ಯು.ಬಿ. ಕಟ್ಟಡದ 10ನೇ ಮಹಡಿಯಲ್ಲಿರುವ ಕೇಂದ್ರ ನಗರ ಪಾಲಿಕೆ ಆಯುಕ್ತರ ಕಛೇರಿ ಸಭಾಂಗಣದಲ್ಲಿ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ್ ಹರ್ಷದ್ ರವರು 5.00 ಲಕ್ಷಗಳ ಮೊತ್ತದ ಚೆಕ್ ನ್ನು ಮೃತರ ಕುಟುಂಬದವರಿಗೆ ವಿತರಿಸಿದರು.

ಈ ವೇಳೆ ಕೇಂದ್ರ ನಗರ ಪಾಲಿಕೆಯ ಆಯುಕ್ತರಾದ ಡಾ: ಕೆ. ಹರೀಶ್ ಕುಮಾರ್ ಹಾಗೂ ಅಭಿವೃದ್ಧಿ ಅಪರ ಆಯುಕ್ತರಾದ ದಲ್ಜಿತ್ ಕುಮಾರ್ ಉಪಸ್ಥಿತರಿದ್ದರು ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ರವರು ತಿಳಿಸಿದ್ದಾರೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L